ಸಂಪುಟ 01 | ಸಂಚಿಕೆ 147 | ಭಾನುವಾರ 19 ಏಪ್ರಿಲ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ವಿಶ್ವ ಯಕೃತ್ತು ದಿನ**

ಯಕೃತ್ತಿಗೆ ಸಂಬಂಧಿಸಿದ ರೋಗಗಳ ಬಗ್ಗೆ ಜಾಗೃತಿ ಮೂಡಿಸಲು ಏಪ್ರಿಲ್ 19 ರಂದು ಆಚರಿಸಲಾಗುತ್ತದೆ. ಯಕೃತ್ತು ದೇಹದಲ್ಲಿ ಎರಡನೇ ಅತಿದೊಡ್ಡ ಅಂಗವಾಗಿದೆ. ಮೆದುಳಿನ ನಂತರ, ಇದು ದೇಹದಲ್ಲಿ ಎರಡನೇ ಅತ್ಯಂತ ಸಂಕೀರ್ಣ ಅಂಗವಾಗಿದೆ. ಇದು ಜೀರ್ಣಕ್ರಿಯೆ, ರೋಗನಿರೋಧಕ ಶಕ್ತಿ, ಚಯಾಪಚಯ ಮತ್ತು ದೇಹದೊಳಗಿನ ಪೋಷಕಾಂಶಗಳ ಶೇಖರಣೆಗೆ ಸಂಬಂಧಿಸಿದ ವಿವಿಧ ನಿರ್ಣಾಯಕ ಕಾರ್ಯಗಳನ್ನು ನಿರ್ವಹಿಸುತ್ತದೆ.

**2) ಪರಶುರಾಮ ಜಯಂತಿ**

ಪರಶುರಾಮ ಜಯಂತಿಯು ವಿಷ್ಣುವಿನ 6ನೇ ಅವತಾರವಾದ ಪರಶುರಾಮನ ಜನ್ಮದಿನವಾಗಿದ್ದು, ವೈಶಾಖ ಮಾಸದ ಶುಕ್ಲ ಪಕ್ಷದ ತೃತೀಯೆಯಂದು (ಅಕ್ಷಯ ತೃತೀಯ) ಆಚ-ರಿಸಲಾಗುತ್ತದೆ. 2026 ರಲ್ಲಿ ಈ ಹಬ್ಬವನ್ನು ಏಪ್ರಿಲ್ 19, ಭಾನುವಾರ ಆಚರಿಸಲಾಗುವುದು. ಇದು ಶಕ್ತಿ ಮತ್ತು ಧರ್ಮದ ಸಂಕೇತವಾಗಿದ್ದು, ಜಮದಗ್ನಿ-ರೇಣುಕೆಯರ ಪುತ್ರನಾಗಿ ಜನಿಸಿದ ಪರಶುರಾಮನು ಅಧರ್ಮವನ್ನು ನಿರ್ಮೂಲನೆ ಮಾಡಲು ಭೂಮಿಗೆ ಬಂದನೆಂದು ನಂಬಲಾಗಿದೆ.

## ಸುಭಾಷಿತ

ನಿಮಗೆ ಮಿಕ್ಕೆಲ್ಲದಕ್ಕಿಂತ ಹಣವೇ ಹೆಚ್ಚು ಮುಖ್ಯ ಅನ್ನಿಸಿದರೆ, ಜೀವನವಿಡೀ ನೀವು ಖರೀದಿಗೆ ಒಳಗಾಗುತ್ತೀರಿ.

–ರೂಮಿ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಮಹಿಳಾ ಮೀಸಲಾತಿ ಮಸೂದೆ ಸೋತಿರುವುದು ಪ್ರಜಾಪ್ರಭುತ್ವದ ಗೆಲುವು :ಪ್ರಿಯಾಂಕ ಗಾಂಧಿ



**ನವದೆಹಲಿ: ಮಹಿಳಾ ಮೀಸಲಾತಿಯ ಹೆಸರಿನಲ್ಲಿ ಕೇಂದ್ರ ಸರ್ಕಾರ ದೇಶದ ಒಕ್ಕೂಟ ವ್ಯವಸ್ಥೆಯನ್ನು ಬದಲಾವಣೆ ಮಾಡಲು ಸಂಚು ರೂಪಿಸಿತ್ತು ಎಂದು ಕಾಂಗ್ರೆಸ್ ನಾಯಕಿ ಪ್ರಿಯಾಂಕ ಗಾಂಧಿ ವಾದ್ರಾ ಆರೋಪಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ಮಸೂದೆ ಸೋತಿರುವುದು ಸಂವಿಧಾನ, ಪ್ರಜಾಪ್ರಭುತ್ವ ಹಾಗೂ ವಿರೋಧ ಪಕ್ಷಗಳ ಏಕತೆಯ ಗೆಲುವಾಗಿದೆ ಎಂದು ಹೇಳಿದ್ದಾರೆ.**

ನಿನ್ನೆ ನಡೆದದ್ದು ಪ್ರಜಾಪ್ರಭುತ್ವದ ದೊಡ್ಡ ಗೆಲುವು. ಒಕ್ಕೂಟ ವ್ಯವಸ್ಥೆ ಬದಲಿಸುವ ಸಂಚು ಸೋತಿದೆ. 2023ರ ಮಹಿಳಾ ಮೀಸಲಾತಿ ಕಾಯ್ದೆಯನ್ನು ಪ್ರಸ್ತುತ ಲೋಕಸಭೆಯ ಸದಸ್ಯರ ಸಂಖ್ಯೆಯ ಆಧ-ಾರದ ಮೇಲೆ ಜಾರಿಗೆ ತರಬೇಕು ಎಂದು ಅವರು ಕೇಂದ್ರ ಸರ್ಕಾರವನ್ನು ಆಗ್ರಹಿಸಿದರು. ಲೋಕಸಭೆಯಲ್ಲಿ ಮಾತನಾಡಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಕಾಂಗ್ರೆಸ್ ಪಕ್ಷವು ವರ್ಷಗಳ ಕಾಲ ಆಡಳಿತ ಪಕ್ಷದ ಟ್ರಜರಿ ಬೆಂಚುಗಳಲ್ಲಿ ಕುಳಿತುಕೊಳ್ಳಲು ಸಾಧ್ಯವಾಗುವುದಿಲ್ಲ ಎಂದು ಹೇಳಿರುವುದು ಅವರ ಮನೋಭಾವವನ್ನು ತೋರಿಸುತ್ತದೆ ಎಂದು ಪ್ರಿಯಾಂಕಾ ಗಾಂಧಿ ಟೀಕಿಸಿದರು.

ಸರ್ಕಾರದ ಉದ್ದೇಶ ಅಧಿಕಾರದಲ್ಲಿ ಮುಂದುವರಿಯುವುದೇ ಆಗಿದ್ದು, 2029ರೊಳಗೆ ಕ್ಷೇತ್ರ ಮರುವಿಂಗಡಣೆ? ನಡೆಯದಿದ್ದರೆ ತಮ ರಾಜಕೀಯ ಲಾಭಕ್ಕೆ ಧಕ್ಕೆಯಾಗುತ್ತದೆ ಎಂಬ ಕಾರಣದಿಂದ ಮಹಿಳಾ ಮೀಸಲಾತಿಯೊಂದಿಗೆ ಸಂಸತ್ ಕ್ಷೇತ್ರಗಳ ಸಂಖ್ಯೆಯನ್ನು ಹೆಚ್ಚಿಸುವ ಕ್ರಮ ಕೈಗೊಂಡಿದ್ದರು ಎಂದು ಆರೋಪಿಸಿದರು. ಮಹಿಳೆಯರ ಹೆಸರಿನಲ್ಲಿ ಈ ಕ್ರಮವನ್ನು ನ್ಯಾಯೀಕರಿಸಲು ಪ್ರಯತ್ನಿಸಲಾಗಿದ್ದು, ಮಸೂದೆ ಅಂಗೀಕಾರವಾದರೂ ಅಥ-ವಾ ತಿರಸ್ಕೃತವಾದರೂ ವಿರೋಧ ಪಕ್ಷಗಳನ್ನು ಮಹಿಳಾ ವಿರೋಧಿಗಳಾಗಿ ಚಿತ್ರಿಸುವ ಯೋಜನೆ ಇದಾಗಿತ್ತು ಎಂದು ಹೇಳಿದರು.

ಮಹಿಳೆಯರ ರಕ್ಷಕರಾಗಿ ತೋ-ರಿಸಿಕೊಳ್ಳುವುದು ಸುಲಭವಲ್ಲ. ಹತ್ರಾಸ್ ಘಟನೆ, ಒಲಿಂಪಿಕ್ ಪದಕ ವಿಜೇತ ಮಹಿಳಾ ಕ್ರೀಡಾಪಟುಗಳ ವಿರುದ್ಧ ನಡೆದ ಘಟನೆಗಳನ್ನು ನಾವು ನೋಡಿದ್ದೇವೆ ಎಂದು ಪ್ರಿಯಾಂಕ ವಾದ್ರಾ ಆಕ್ರೋಶ ವ್ಯಕ್ತಪಡಿಸಿದರು.ಮಹಿಳಾ ಮೀಸಲಾತಿ ಮಸೂದೆಗೆ ವಿರೋಧ ಪಕ್ಷಗಳು ಬೆಂಬಲ ನೀಡಲು ಸಾಧ್ಯವಾಗಲಿಲ್ಲ. ಆದ-ರೆ, ಏಕತೆಯಿಂದ ಇದ್ದರೆ ಸರ್ಕಾರವನ್ನು ಸೋಲಿಸಬಹುದು ಎಂಬುದನ್ನು ಇದು ತೋರಿಸಿದೆ ಎಂದು ಅವರು ಹೇಳಿದರು.

# ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ತಹಶೀಲ್ದಾರ್ ಗೆ ಮನವಿ



**ನೈಜ್ಯ ದೆಸೆ ನ್ಯೂಸ್**

**ತಾಳಿಕೋಟೆ: ತಾಲ್ಲೂಕಿನ ಕಲಕೇರಿ ಗ್ರಾಮ ಪಂಚಾಯತಿಯ ಸಮಗ್ರ ಭ್ರಷ್ಟಾಚಾರ ತನಿಖೆ ಮತ್ತು ಸರ್ವೆ 1 ರಲ್ಲಿ ನಿರ್ಮಿಸಿರುವ ವಾಣಿಜ್ಯ ಮಳಿಗೆಗಳಿಗೆ ಬೇಗ ರೋಸ್ಟರ್ ಬಿಂದುವಿನಂತೆ ಹಂಚಿಕೆ ಮಾಡುವಂತೆ ಒತ್ತಾಯಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಕಲಕೇರಿ ವಲಯಶಾಖೆ ವತಿಯಿಂದ ಸ್ಥಳೀಯ ತಹಶೀಲ್ದಾರ ಅವ-ರಿಗೆ ಶನಿವಾರ ಮನವಿ ಸಲ್ಲಿಸಲಾಯಿತು.**

ತಮ್ಮ ಸಮಘಟನೆಯ ವತಿಯಿಂದ ತಾಲ್ಲೂಕಿನ ಕಲಕೇರಿ ಗ್ರಾಮ ಪಂಚಾಯತಿಯಲ್ಲಿ ಭ್ರಷ್ಟಾಚಾರ ತನಿಖೆಯಾಗಬೇಕು ಎಂದು ಒತ್ತಾಯಿಸಿ ಪಾದಯಾತ್ರೆ ಮಾಡಿ ಮನವಿ ಸಲ್ಲಿಸಲಾಗಿತ್ತು. ಆದರೆ ಎರಡು ತಿಂಗಳು ಕಳೆದರೂ ಯಾವುದೇ ತನಿಖೆ ನಡೆದಿರುವುದಿಲ್ಲ ಹಾಗೂ ವಾಣಿಜ್ಯ ಮಳಿಗೆಗಳ ಕಾಮಗಾರಿ ನಿಲ್ಲಿಸಿಲ್ಲ, ನಕಲಿ ಠರಾವು ಮಾಡಿದದ್'ಉ ತಕ್ಷಣ ವಾಣಿಜ್ಯ ಮಳಿಗೆಗಳಿಗೆ ಬೀಗ ಹಾಕಿ ಠರಾವು ರದ್ದುಗೊಳಿಸಿ ಮರುಹಂಚಿಕೆಯಾಗಬೇಕುವಾಣಿಜ್ಯ ಮಳಿಗೆಗಳನ್ನು ನಿಯಮಾನುಸಾರ ಮೀಸಲಾತಿಯನ್ವಯ ಹಂಚಿಕೆ ಮಾಡಬೇಕು.

ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಿಕೊಡುವ ಭರವಸೆಯೊಂದಿಗೆ ಈ ಹಿಂದೆ ಇದ್ದ ಅಂಗಡಿಗಳನ್ನು ತೆರವುಗೊಳಿಸಿದ್ದಾರೆ. ತೆರವುಗೊಳಿಸಿರುವ ಮೂಲ ವರ್ತಕರು ಜೀವನೋಪಾಯಕ್ಕೆ ಕಷ್ಟಪಡುತ್ತಿದ್ದು ಅವರಿಗೆ ಅಂಗಡಿ ನಿರ್ಮಿಸಲು ಅನುಮತಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದರು. ಈ ಸಂದರ್ಭದಲ್ಲಿ ದಲಿತ ಸಂಘರ್ಷ ಸಮಿತಿ ಸಂಚಾಲಕ ಸೋಮಶೇಖರ ಬಡಿಗೇರ, ಸಲೀಮ್ ಬಡೇಮಗೋಳ, ಸಮೀರ ಮಂದೇವಾಲೆ, ಸದ್ದಾಂ ತುಂಬಗಿ, ಪ್ರಕಾಶ ದೊಡಮನಿ, ಅರುಣ ಪೂಜಾರಿ, ಇಂತೀಯಾಜ್ ಹೊರಪೇಟಿ, ದೇವೇಂದ್ರ ವಡ್ಡರ, ಬಾಬಾ ಇನಾಮದಾರ, ಮೈಬೂಬ ಚೌದ್ರಿ, ಸಮಿರ ಬಿಸನಾಲ, ಸಾಹಿಲ್ ಇದ್ದರು.

# ಭಕ್ತಿ ಭಾವಕ್ಕೆ ಸಾಕ್ಷಿಯಾದ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮ

**ನೈಜ್ಯ ದೆಸೆ ನ್ಯೂಸ್**



**ತಾಳಿಕೋಟಿ: ತಾಲೂಕಿನ ನಾವದಗಿ ಗ್ರಾಮ ಬ್ರಹನ್ಮಠದ ಲಿಂಗೈಕ್ಯ ಶ್ರೀ ಷ.ಬ್ರ.ಶತಾಯುಷಿ, ಆಯುರ್ವೇದಿಕ್ ಪಂಡಿತ ಪರ್ವತ ಶಿವಾಚಾರ್ಯ ಮಹಾಸ್ವಾಮಿಗಳ 26ನೇ ವರ್ಷದ ಪುಣ್ಯಸ್ಮರಣೋತ್ಸವ ನಿಮಿತ್ಯವಾಗಿ ಶನಿವಾರ ನಡೆದ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಭಕ್ತಿ ಭಾವದೊಂದಿಗೆ ಜರುಗಿದವು.**

ಪುಣ್ಯ ಸ್ಮರಣೋತ್ಸವ ಅಂಗವಾಗಿ ಬೆಳಿಗ್ಗೆ 8:00 ಘಂಟೆಗೆ ಲಿಂಗೈಕ್ಯ ಶ್ರೀ ಷ.ಬ್ರ. ಪರ್ವತ ಶಿವಾಚಾರ್ಯ ಮಹಾಸ್ವಾಮಿಗಳ ಕರ್ತೃ ಗದ್ದುಗೆ ರುದ್ರಾಭಿಷೇಕ ಬಿಲ್ವಾರ್ಚನೆ ಹಾಗೂ ವಿಶೇಷ ಪೂಜೆ ವಿಧಿ ವಿಧಾನಗಳು ಶ್ರೀ ಮಠದ ಪೂಜ್ಯರಾದ ಷ.ಬ್ರ. ಶ್ರೀ ರಾಜ ಗುರು ರಾಜೇಂದ್ರ ಒಡೆಯರ ಶಿವಾಚಾರ್ಯ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಜರುಗಿದವು. ನಂತರ ಗ್ರಾಮದ ಪ್ರಮುಖ ಬೀದಿಗಳಲ್ಲಿ ಪೂಜ್ಯ ಲಿಂಗೈಕ್ಯ ಪರ್ವತ ಶಿವಾಚಾರ್ಯರ ಪಲ್ಲಕ್ಕಿಯೊಂದಿಗೆ ಅವರ ಭಾವಚಿತ್ರದ ಭವ್ಯ ಮೆರವಣಿಗೆ ಸಕಲವಾದ್ಯ ಮೇಳಗಳೊಂದಿಗೆ ನಡೆಯಿತು.

ಮಧ್ಯಾಹ್ನ 1:00 ಘಂಟೆಗೆ ನೂತನ ಮಠದಲ್ಲಿ ಮಹಾಪ್ರಸಾದ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಪುಣ್ಯಸ್ಮರಣೋತ್ಸವ ಅಂಗವಾಗಿ ದಿನವಿಡೀ ನಡೆದ ಎಲ್ಲ ಧಾರ್ಮಿಕ ಕಾರ್ಯಕ್ರಮಗಳಲ್ಲಿ ನಾವದಗಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ನೂರಾರು ಸದ್ ಭಕ್ತರು ಭಾಗವಹಿಸಿ ಪರ್ವತ ಶಿವಾಚಾರ್ಯರ ಕೃಪೆಗೆ ಪಾತ್ರರಾದರು.

# ಮಸ್ಕಿ: ಎಪಿಎಂಸಿ ಯಲ್ಲಿ ನಡೆದ ಭ್ರಷ್ಟಾಚಾರ, ಮೀಸಲಾತಿ ಉಲ್ಲಂಘನೆ, ಆಡಳಿತಾತ್ಮಕ ಅಕ್ರಮಗಳ ಕುರಿತು ಸಚಿವರಿಗೆ ದೂರು

**ನೈಜ್ಯ ದೆಸೆ ನ್ಯೂಸ್**



**ಮಸ್ಕಿ: ಜಿಲ್ಲಾ ದಲಿತ ಸಂರಕ್ಷಣಾ ಸಮಿತಿ ಅಧ್ಯಕ್ಷ ಬಾಲಸ್ವಾಮಿ ಚಿನ್ನಾಪೂರ ಮತ್ತು ಪದಾಧಿಕಾರಿಗಳು ಇವರು ಮಸ್ಕಿಗೆ ಆಗಮಿಸಿದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಸಚಿವ ಶಿವಾನಂದ ಪಾಟೀಲ್ ಇವರಿಗೆ ದೂರು ಸಲ್ಲಿಸುತ್ತಾ ಮಸ್ಕಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ 2014-15ನೇ ಸಾಲಿನಲ್ಲಿ ಹಂಚಿಕೆಗೊಂಡ ನಿವೇಶನಗಳಲ್ಲಿ ಅನೇಕವು 10 ವರ್ಷಗಳಾದರೂ ಕಟ್ಟಡ ನಿರ್ಮಾಣವಾಗಿಲ್ಲ.**

ಇದಲ್ಲದೆ ಪರಿಶಿಷ್ಠಜಾತಿ,ಪರಿಶಿಷ್ಟ ಪಂಗಡಗಳಿಗೆ ಕಾನೂನು ಬದ್ಧವಾಗಿ ನೀಡಬೇಕಾದ ಮೀಸಲಾತಿಯನ್ನು ಸಂಪೂರ್ಣವಾಗಿ ಉಲ್ಲಂಘಿಸಿ ಒಂದು ನಿವೇಶವನ್ನು ನೀಡದೆ ಹಾಗೆ ಲೈಸೆನ್ಸ್ ವಿಷಯದಲ್ಲಿ ಕೂಡ ಯಾವುದೇ ಮಾನ್ಯತೆ ನೀಡದೆ ಅನ್ಯಾಯ ಮಾಡಲಾಗಿದೆ, ಸರ್ಕಾರದ ಯೋಜನೆಗಳನ್ನು ಈ ವರ್ಗಗಳಿಗೆ ಸಮರ್ಪಕವಾಗಿ ಪ್ರಚಾರ ಮಾಡದೆ ಉದ್ದೇಶಪೂರ್ವಕವಾಗಿ ನಿರ್ಲಕ್ಷಿಸಲಾಗಿದೆ ಎಂದು ಹೇಳುತ್ತಾ, ಮುಂದಿನ ದಿನಗಳಲ್ಲಿ ಈ ಎಲ್ಲಾ ವಿಷಯವಾಗಿ ತಕ್ಷಣ ಕ್ರಮ ಕೈಗೊಳ್ಳದಿದ್ದಲ್ಲಿ,

ನಮ್ಮ ಸಂಘಟನೆಯ ವತಿಯಿಂದ ರಾಜ್ಯ ಮಟ್ಟದಲ್ಲಿ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಬಾಲಸ್ವಾಮಿ ಜಿನ್ನಾಪೂರ ಜಿಲ್ಲಾಧ್ಯಕ್ಷರು ದಲಿತ ಸಂರಕ್ಷಣಾ ಸಮಿತಿಯ ಪದಾಧಿಕಾ-ರಿಗಳು ಸೇರಿ ಸಚಿವ ಶಿವಾನಂದ ಪಾಟೀಲ್ ಇವರಿಗೆ ದೂರು ಸಲ್ಲಿಸಿದರು. ಈ ವೇಳೆಯಲ್ಲಿ ಸಿದ್ದಪ್ಪ ಹೂವಿನಭಾವಿ, ಅಮರಪ್ಪ ಡಬ್ಬೇರಮಡುಗು, ಮ-ರಿಸ್ವಾಮಿ ಬೆನಕನಾಳ, ವಿಜಯಕುಮಾರ ಹರ್ವಾಪೂರ, ನಾಗರಾಜ ಅಂತರಗಂಗೆ ಶಿವಪ್ಪ ಸಂತೆಕೆಲ್ಲೂರ, ಲಕ್ಷ್ಮಣ ಕಡಬೂರು ಹಾಗೂ ಇತರ ಪದಾಧಿಕಾರಿಗಳು ಇದ್ದರು.

# ಸನ್ ರೈಸ್ ಕಾಲೇಜಿನ ಶನಿವಾರದ ಉಪನ್ಯಾಸದಲ್ಲಿ ಕ್ಷ–ಕಿರಣಗಳ ಬಗ್ಗೆ ಮಾಹಿತಿ ನೀಡಿದ ಶಾಹೀನ್

**ನೈಜ್ಯ ದೆಸೆ ನ್ಯೂಸ್**



**ಸಿಂಧನೂರು: ನಗರದ ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾಮೆಡಿಕಲ್ ಕಾಲೇಜು ಸಿಂಧನೂರು ವತಿಯಿಂದ ಪ್ರತೀ ಶನಿವಾರ ನಡೆಯುವ ಉಪನ್ಯಾಸ ಸರಣಿಯ ಅಂಗವಾಗಿ, ದಿನಾಂಕ 18 ಏಪ್ರಿಲ್ ಶನಿವಾರದಂದು ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮ ಜರುಗಿ-ತು. ಈ ಕಾರ್ಯಕ್ರಮಕ್ಕೆ ವಿಶೇಷ ಅತಿಥಿಯಾಗಿ ಶಾಹೀನ್ ಮೇಡಂ ಆಗಮಿಸಿ "ಕ್ಷ-ಕಿರಣಗಳ ಮಹತ್ವ ಮತ್ತು ವೈದ್ಯಕೀಯ ಕ್ಷೇತ್ರದಲ್ಲಿ ಅವುಗಳ ಬಳಕೆ" ಎಂಬ ವಿಷಯದ ಕುರಿತು ವಿದ್ಯಾರ್ಥಿಗಳಿಗೆ ವಿಶ್ಲೃತವಾಗಿ ಮಾಹಿತಿ ನೀಡಿದರು.**

ತಮ್ಮ ಉಪನ್ಯಾಸದಲ್ಲಿ ಅವರು ಕ್ಷ-ಕಿರಣಗಳು (X-rays) ಎಂಬವು ಮಾನವ ದೇಹದ ಒಳಗಿನ ಭಾಗಗಳನ್ನು ಸ್ಪಷ್ಟವಾಗಿ ನೋಡಲು ಸಹಾಯ ಮಾಡುವ ಮಹತ್ವದ ತಂತ್ರಜ್ಞಾನವಾಗಿದ್ದು, ವೈದ್ಯಕೀಯ ಕ್ಷೇತ್ರದಲ್ಲಿ ಅವುಗಳ ಪಾತ್ರ ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು. ದೇಹದ ಎಲುಬುಗಳು ಮುರಿದಿದೆಯೇ ಅಥವಾ ಗಾಯಗಳಾಗಿದೆಯೇ ಎಂಬುದನ್ನು ತಕ್ಷಣವೇ ಪತ್ತೆಹಚ್ಚಲು ಕ್ಷ-ಕಿರಣಗಳು ಉಪಯೋಗವಾಗುತ್ತವೆ. ಹಾಗೆಯೇ, ಶ್ವಾಸಕೋಶದ ಸಮಸ್ಯೆಗಳು, ಹೃದಯ ಸಂಬಂಧಿತ ಅಸಾಮಾನ್ಯತೆಗಳು, ದಂತ ಸಮಸ್ಯೆಗಳು ಹಾಗೂ ಅನೇಕ ರೋಗಗಳ ನಿರ್ಧಾರಕ್ಕೆ ಇದು ಅವಿಭಾಜ್ಯ ಸಾಧನವಾಗಿದೆ ಎಂದು ವಿವರಿಸಿದರು.

ಇದೇ ವೇಳೆ, ವೈದ್ಯರು ಸರಿಯಾದ ಚಿಕಿತ್ಸೆ ನೀಡಲು ಕ್ಷ-ಕಿರಣಗಳ ಸಹಾಯ ಅತ್ಯಂತ ಮುಖ್ಯವಾಗಿದ್ದು, ರೋಗದ ಮೂಲವನ್ನು ಗುರುತಿಸಲು ಮತ್ತು ಸರಿಯಾದ ಚಿಕಿತ್ಸಾ ವಿಧಾನವನ್ನು ಆಯ್ಕೆ ಮಾಡಲು ಇದು ನೆರವಾಗುತ್ತದೆ ಎಂದು ಅವರು ಹೇಳಿದರು.ಕ್ಷ-ಕಿರಣ ತಂತ್ರಜ್ಞಾನವು ನರ್ಸಿಂಗ್ ಹಾಗೂ ಪ್ಯಾರಾಮೆಡಿಕಲ್ ವಿದ್ಯಾರ್ಥಿಗಳಿಗೆ ತಿಳಿದಿರಬೇಕಾದ ಪ್ರಮುಖ ವಿಷಯವಾಗಿದ್ದು, ಇದು ಅವರ ಭವಿಷ್ಯದ ವೃತ್ತಿಜೀವನದಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು.ಇದಲ್ಲದೆ, ನರ್ಸಿಂಗ್ ವೃತ್ತಿಯ ಮಹತ್ವವನ್ನು ವಿವರಿಸಿದ





ಶಾಹೀನ್ ಮೇಡಂ ಅವರು, ನರ್ಸ್‌ಗಳು ವೈದ್ಯಕೀಯ ಕ್ಷೇತ್ರದ ಬೆನ್ನೆಲುಬಾಗಿದ್ದು, ರೋಗಿಗಳ ಸೇವೆಯಲ್ಲಿ ಮಹತ್ವದ ಪಾತ್ರ ವಹಿಸುತ್ತಾರೆ ಎಂದು ಹೇಳಿದರು.

ವಿದ್ಯಾರ್ಥಿಗಳು ತಮ್ಮ ವೃತ್ತಿಯಲ್ಲಿ ನಿಷ್ಠೆ, ಕರುಣೆ ಮತ್ತು ಶ್ರದ್ಧೆ ಹೊಂದಿದರೆ ಮಾತ್ರ ಉತ್ತಮ ಆರೋಗ್ಯ ಸೇವೆಯನ್ನು ನೀಡಲು ಸಾಧ್ಯ ಎಂದು ಪ್ರೇರಣಾದಾಯಕವಾಗಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸವನ್ನು ಹೆಚ್ಚಿಸಿದರು.ಈ ಸಂದರ್ಭದಲ್ಲಿ ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಲಾಜರ್ ಸಿರಿಲ್ ಅವರು ಮಾತನಾಡಿ, ಇಂತಹ ಉಪನ್ಯಾಸಗಳು ವಿದ್ಯಾರ್ಥಿಗಳ ಜ್ಞಾನವನ್ನು ವಿಸ್ತರಿಸಲು ಹಾಗೂ ಪ್ರಾಯೋಗಿಕ ಅರಿವು ಹೆಚ್ಚಿಸಲು ಸಹಾಯಕವಾಗುತ್ತವೆ ಎಂದು ಹೇಳಿದರು. ಅಧ್ಯಕ್ಷರ ಪರವಾಗಿ, ಕಾರ್ಯದರ್ಶಿಗಳ ಪರವಾಗಿ, ಎಲ್ಲಾ ಪ್ರಾಚಾರ್ಯರ ಪರವಾಗಿ ಹಾಗೂ ಉಪನ್ಯಾಸಕರ ಪರವಾಗಿ ಶಾಹೀನ್ ಮೇಡಂ ಅವರು ನೀಡಿದ ಮಹತ್ವದ ಮಾಹಿತಿಗಾಗಿ ತುಂಬು ಹೃದಯದ ಧನ್ಯವಾದಗಳನ್ನು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಇರ್ಷಾದ್ ಕೆ, ನರ್ಸಿಂಗ್ ಪ್ರಾಚಾರ್ಯ ಲಾಜರ್ ಸಿರಿಲ್, ಉಪನ್ಯಾಸಕರಾದ ರಾಜೇಶ್, ಅಶು ಪಾಷಾ, ಸಂತೋಷಿ, ವೀರೇಶ್ವರಿ, ಸುಧಾ, ವೀರೇಶ್, ರಾಧಿಕಾ, ಚೈತ್ರ, ಸುರೇಶ್ ಯಾದವ್ ಸೇರಿದಂತೆ ಅನೇಕ ಉಪನ್ಯಾಸಕರು ಹಾಗೂ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.ಕಾರ್ಯಕ್ರಮವು ಜ್ಞಾನವರ್ಧಕ ಹಾಗೂ ಪ್ರೇರಣಾದಾಯಕವಾಗಿ ನಡೆಯಿತು.

## ಸಾಹಿತ್ಯ ಸಿಂಚನ

ನಗು

ನಗು ಒಂದು ಮೌನದ ಮಾತು,
ಹೃದಯ ಹೇಳುವ ಸಿಹಿ ಹಾಡು.

ನಗುವಿನ ಬೆಳಕು ಚೆಲ್ಲಿದಾಗ,
ದುಃಖವೂ ದೂರ ಓಡಿಹೋಗುತ್ತದೆ.

ಒಂದು ನಗು ಮನ ಗೆಲ್ಲುತ್ತದೆ,
ಒಡೆದ ಮನಸು ಕೂಡ ಜೋಡಿಸುತ್ತದೆ.

ನಗು ಇಲ್ಲದ ಜೀವನ ಬತ್ತಿದ ತೋಟ,
ನಗು ಇದ್ದರೆ ಬದುಕೇ ಹಸಿರು ಹೊಲ.

ನಗುವೇ ನಮ್ಮ ಸೌಂದರ್ಯ ಆಭರಣ,
ಅದು ಮಾನವನ ನಿಜವಾದ ಗುರುತು ಚಿಹ್ನೆ.

ರಮೇಶ್

## ಏಪ್ರಿಲ್ 27ರಿಂದ ಕ್ರೀಡಾ ಶಾಲೆ, ವಸತಿ ನಿಲಯಗಳ ಪ್ರವೇಶಕ್ಕೆ ಶಿಬಿರ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ನಿರ್ವಹಿಸಲಾಗುತ್ತಿರುವ ಕ್ರೀಡಾ ವಸತಿ ಶಾಲೆ ಹಾಗೂ ನಿಲಯಗಳಿಗೆ 2026-27ನೇ ಸಾಲಿಗೆ ಪ್ರವೇಶ ನೀಡಲು ಕ್ರೀಡಾಪಟುಗಳ ಆಯ್ಕೆ ಕುರಿತು ಅಂತಿಮ ರಾಜ್ಯ ಮಟ್ಟದ ಆಯ್ಕೆ ಶಿಬಿರವನ್ನು ಏಪ್ರಿಲ್. 27ರಿಂದ ಮೇ.01ರವರೆಗೆ ರಾಜ್ಯದ ಕೆಲವು ಸ್ಥಳಗಳಲ್ಲಿ ವಿವಿಧ ಕ್ರೀಡೆಗಳಿಗೆ ಆಯ್ಕೆ ಶಿಬಿರಗಳನ್ನು ಆಯೋಜಿಸಲು ಉದ್ದೇಶಿಸಲಾಗಿದೆ.**

8ನೇ ತರಗತಿ ಮತ್ತು ಪ್ರಥಮ ಪಿ.ಯು.ಸಿ ವಿದ್ಯಾರ್ಥಿಗಳಿಂದ ಕಿರಿಯರ ಮತ್ತು ಹಿರಿಯ ವಿಭಾಗದಲ್ಲಿ ಕ್ರೀಡಾ ವಸತಿ ಶಾಲೆಗಳ ಆಯ್ಕೆಯನ್ನು ಪ್ರಸ್ತುತ 7ನೇ ತರಗತಿ ಅಭ್ಯಾಸ ಮಾಡುತ್ತಿರುವ ಬಾಲಕ ಅಥವಾ ಬಾಲಕಿಯರಿಗಾಗಿ ದಿನಾಂಕ 01-06-2026 ರಂದು 14 ವರ್ಷದೊಳಗಿರಬೇಕು ಮತ್ತು 8ನೇ ತರಗತಿಗೆ ಪ್ರವೇಶ ಪಡೆಯಲು ಅರ್ಹರಾಗಿರಬೇಕು. ಹಿರಿಯರ ವಿಭಾಗದ ಕ್ರೀಡಾ ವಸತಿ ಶಾಲೆಗಳ ಆಯ್ಕೆಯಲ್ಲಿ ಭಾಗವಹಿಸುವ ಕ್ರೀಡಾಪಟುಗಳು ದಿನಾಂಕ 01-06-2026 ರಂದು 18 ವರ್ಷದೊಳಗಿದ್ದು, ಪ್ರಥಮ ಪಿ.ಯು.ಸಿ ಪ್ರವೇಶ ಪಡೆಯಲು ಅರ್ಹರಿರಬೇಕು. ಆಯ್ಕೆಯನ್ನು ಪ್ರಸ್ತುತ 10ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಬಾಲಕ ಅಥವಾ ಬಾಲಕಿಯರಿಗಾಗಿ ಆಯ್ಕೆ ನಡೆಸಲಾಗುತ್ತಿದೆ. ವ್ಯಾಸಾಂಗ ಮಾಡುತ್ತಿರುವ ಶಾಲಾ ಮುಖ್ಯಸ್ಥರಿಂದ ಜನ್ಮ ದಿನಾಂಕ ಪ್ರಮಾಣಪತ್ರ ಹಾಗೂ ವ್ಯಾಸಂಗ ಮಾಡುತ್ತಿರುವ ತರಗತಿಯ ವಿವರಗಳನ್ನೊಳಗೊಂಡ ದೃಢೀಕರಣ ಪತ್ರವನ್ನು ಆಯ್ಕೆ ದಿನದಂದು ಕಡ್ಡಾಯವಾಗಿ ತರಬೇಕು. ಆಸಕ್ತ ಕ್ರೀಡಾಪಟುಗಳು ನಿಗದಿತ ಅರ್ಜಿಯನ್ನು ಇಲಾಖೆಯಿಂದ ಪಡೆದು ಭರ್ತಿ ಮಾಡಿ ರಾಜ್ಯ ಮಟ್ಟದ ಆಯ್ಕೆ ಪ್ರಕ್ರಿಯೆ ಶಿಬಿರದಲ್ಲಿ ಭಾಗವಹಿಸಬಹುದಾಗಿದೆ. ರಾಜ್ಯದ ಯಾವುದೇ ಭಾಗದ ಕ್ರೀಡಾಪಟಗಳು ಭಾಗವಹಿಸಲು ಮುಕ್ತ ಅವಕಾಶವಿರುತ್ತದೆ. ಆಯ್ಕೆಯಲ್ಲಿ ಪಾಲ್ಗೊಳ್ಳುವ ಕ್ರೀಡಾಪಟುಗಳಿಗೆ ಯಾವುದೇ ವಿಧವಾದ ಭತ್ಯೆಯನ್ನು ನೀಡಲಾಗುವುದಿಲ್ಲ. ಹೆಚ್ಚಿನ ವಿವರಗಳಿಗೆ ಸಹಾಯಕ ನಿರ್ದೇಶಕರ ಕಚೇರಿ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ ರಾಯಚೂರು ಇಲ್ಲಿ ಅಥವಾ ಖೇಲೋ ಇಂಡಿಯಾ ತರಬೇತುದಾರರು ಚಂದ್ರಶೇಖರ್ ದೂರವಾಣಿ ಸಂಖ್ಯೆ: 9886551214ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

## ರಾಷ್ಟ್ರೀಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ ಜಿಲ್ಲಾ ಮೇಲುಸ್ತುವಾರಿ ಸಮಿತಿ ಸಭೆ

## ಜಾನುವಾರುಗಳಿಗೆ ಲಸಿಕೆ ಹಾಕುವ ಕಾರ್ಯಕ್ರಮ ಯಶಸ್ವಿಗೊಳಿಸಿ: ಎಡಿಸಿ ಶಿವಾನಂದ

ನೈಜ್ಯ ದೆಸೆ ನ್ಯೂಸ್



**ರಾಯಚೂರು: ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ ಜಿಲ್ಲೆಯಲ್ಲಿ ಏಪ್ರಿಲ್ 23 ರಿಂದ ಮೇ.22ರವರೆಗೆ ಎಲ್ಲ ದನ ಹಾಗೂ ಎಮ್ಮೆಗಳಿಗೆ ಕಾಲುಬಾಯಿ ಜ್ವರ ಲಸಿಕೆ ಹಾಕುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ರೈತರು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಹೇಳಿದರು.**

ಏಪ್ರಿಲ್ 18ರ ಶನಿವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ 9ನೇ ಜಿಲ್ಲಾ ಮೇಲುಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ರಾಜ್ಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ ಮೇಲುಸ್ತುವಾರಿ ಸಮಿತಿಯ ಸೂಚನೆಯಂತೆ ಏಪ್ರಿಲ್ 23 ರಿಂದ ಮೇ 22ರವರೆಗೆ 9ನೇ ಸುತ್ತಿನ ಕಾಲುಬಾಯಿ ಜ್ವರ ಲಸಿಕೆ ಕಾರ್ಯಕ್ರಮವನ್ನು ಜಿಲ್ಲೆಯ ಎಲ್ಲಾ ದನ ಹಾಗೂ ಎಮ್ಮೆಗಳಿಗೆ ಹಾಕುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಈ ಕಾರ್ಯಕ್ರಮದಡಿ ರೈತರ ಮನೆ ಬಾಗಿಲಲ್ಲಿ ದನ ಮತ್ತು ಎಮ್ಮೆಗಳಿಗೆ ಕಾಲುಬಾಯಿ ಬೇನೆ ಲಸಿಕೆ ಹಾಕಲಾಗುವುದು. ಈ ಕಾರ್ಯಕ್ಕಾಗಿ ಜಿಲ್ಲೆಯಲ್ಲಿ 29 ತಂಡಗಳನ್ನು ರಚಿಸಿದ್ದು, ಪ್ರತಿ ತಂಡದಲ್ಲಿ 1 ಮೇಲ್ವಿಚಾರಕರು ಹಾಗೂ 2 ಲಸಿಕದಾರರು ಇರುತ್ತಾರೆ. ಜಿಲ್ಲೆಯಲ್ಲಿರುವ 315280 ದನಗಳು ಹಾಗೂ 231927 ಎಮ್ಮೆಗಳನ್ನು ಲಸಿಕಾಕರಣಕ್ಕೆ ಒಳಪಡಿಸಲಾಗುವುದು. ಜಿಲ್ಲೆಯಲ್ಲಿ ಪ್ರತಿ 120 ಜಾನುವಾರಗಳಿಗೆ ಒಂದು ಬ್ಲಾಕ್ ಮಾಡಲಾಗಿದೆ ಎಂದರು. ಲಸಿಕಾ ಅಭಿಯಾನದ ನಂತರ ಅಭಿಯಾನದಲ್ಲಿ ಬಿಟ್ಟು ಹೋಗಿರುವ ಜಾನುವಾರುಗಳಿಗೆ ಲಸಿಕೆ ಹಾಕಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಅವರು ತಿಳಿಸಿದರು.

ಜಿಲ್ಲೆಯ ದನ, ಎಮ್ಮೆಗಳು ಕಾಲುಬಾಯಿ ಬೇನೆ ಮುಕ್ತವಾದಲ್ಲಿ ಜಾನುವಾರುಗಳ ಉತ್ಪನ್ನಗಳನ್ನು ಹೆಚ್ಚಿಸಿ, ರೈತರ ಆರ್ಥಿಕ ಪರಿಸ್ಥಿತಿ ಉತ್ತಮಗೊಳ್ಳಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಅವರು ಹೇಳಿದರು. ಲಸಿಕಾ ಅಭಿಯಾನ ಕಾರ್ಯಕ್ರಮದಲ್ಲಿ ರೈತರು ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಿ ಶೇ.100 ರಷ್ಟು ಗುರಿ ಸಾಧಿಸಲು ಸಹಕರಿಸಲು ಗ್ರಾಮೀಣ ಭಾಗದಲ್ಲಿ ಹೆಚ್ಚು ಜಾಗೃತಿ ಮೂಡಿಸುವಂತೆ ಅಪರ ಜಿಲ್ಲಾಧಿಕಾರಿ ಅವರು ತಿಳಿಸಿದರು. ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಪೋಮ್‌ಸಿಂಗ್ ಅವರು ಸ್ವಾಗತಿಸಿ, ಸಭೆ ನಿರ್ವಹಿಸಿದರು. ಸಭೆಯಲ್ಲಿ ಜಿಲ್ಲೆಯ ವಿವಿಧ ತಾಲೂಕಿನ ಪಶುವೈದ್ಯಾಧಿಕಾರಿಗಳು, ಕೆ.ಎಮ್.ಎಫ್ ವಿಸ್ತರಣಾಧಿಕಾರಿಗಳು, ಕೆ.ಎಮ್.ಎಫ್ ಪಶು ಅಧಿಕಾರಿಗಳು, ಮುಖ್ಯ ಪಶು ಅಧಿಕಾರಿಗಳು ಸಭೆಯಲ್ಲಿ ಇದ್ದರು.

## ಜೆಡಿಎಸ್ ಪಕ್ಷದ ಕಾರ್ಯಕರ್ತನ ಅಸಮಾಧಾನ :ಸಕ್ರಿಯ ಕಾರ್ಯಕರ್ತ ಪರಶುರಾಮ್ ಬಾಗಲವಾಡ ರಾಜೀನಾಮೆ

ನೈಜ್ಯ ದೆಸೆ ನ್ಯೂಸ್



**ಮಾನ್ವಿ: ತಾಲ್ಲೂಕಿನ ಜೆಡಿಎಸ್ ಪಕ್ಷದ ನಿಷ್ಠಾವಂತ ಹಾಗೂ ಸಕ್ರಿಯ ಕಾರ್ಯಕರ್ತರಾಗಿದ್ದ ಪರಶುರಾಮ್ ಬಾಗಲವಾಡ ಅವರು ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡುವ ಮೂಲಕ ಜೆಡಿಎಸ್ ಬಿಗ್ ಶಾಕ್ ನೀಡಿದ್ದಾರೆ.**

ಕಳೆದ ಮೂರು ವರ್ಷಗಳಿಂದ ಮಾನ್ವಿ ವಿಧಾನಸಭಾ ಕ್ಷೇತ್ರದಲ್ಲಿ ಪಕ್ಷದ ಸಂಘಟನೆಗಾಗಿ ಅವಿರತವಾಗಿ ದುಡಿದು ಸುಮಾರು 15 ವರ್ಷ ನಿಸ್ವಾರ್ಥವಾಗಿ ರಾಜಾ ವೆಂಕಟಪ್ಪ ನಾಯಕರು ಶಾಸಕರಾಗುವಲ್ಲಿ ಶ್ರಮಿಸಿದ್ದಾರೆ, ಇತ್ತೀಚಿನ ದಿನಗಳಲ್ಲಿ ಪಕ್ಷದೊಳಗಿನ ಕೆಲವು ನಾಯಕರ ನಡೆ ಹಾಗೂ ಸಿದ್ಧಾಂತಗಳಲ್ಲಿನ ಬದಲಾವಣೆಗಳಿಂದ ಬೇಸತ್ತು ಈ ತೀರ್ಮಾನ ಕೈಗೊಂಡಿದ್ದಾರೆ ಎಂದು ತಿಳಿದುಬಂದಿದೆ. ನಿಸ್ವಾರ್ಥ ಸೇವೆಗೆ ಬೆಲೆ ಇಲ್ಲ: ರಾಜೀನಾಮೆ ಕುರಿತು ಮಾತನಾಡಿದ ಪರಶುರಾಮ್ ಬಾಗಲವಾಡ ಅವರು, "ಪಕ್ಷದ ಸಂಕಷ್ಟದ ಸಮಯದಲ್ಲಿ ನಿಷ್ಠೆಯಿಂದ ಕೆಲಸ ಮಾಡಿದ್ದೇನೆ.

ಆದರೆ ಪ್ರಸ್ತುತ ಪಕ್ಷದೊಳಗೆ ಉಂಟಾಗಿರುವ ಕೆಲವು ಆಂತರಿಕ ಮನಸ್ತಾಪಗಳು ಹಾಗೂ ಕಾರ್ಯಕರ್ತರನ್ನು ಕಡೆಗಣಿಸುವ ಧೋರಣೆಯಿಂದಾಗಿ ನನಗೆ ತುಂಬಾ ನೋವುಂಟಾಗಿದೆ. ಸ್ವಾಭಿಮಾನಕ್ಕೆ ಧಕ್ಕೆಯಾದ ಕಡೆ ಇರುವುದು ಸರಿಯಲ್ಲ ಎಂದು ಭಾವಿಸಿ ಸ್ವಇಚ್ಛೆಯಿಂದ ರಾಜೀನಾಮೆ ನೀಡುತ್ತಿದ್ದೇನೆ," ಎಂದು ತಮ್ಮ ಅಳಲು ತೋಡಿಕೊಂಡಿದ್ದಾರೆ. ಮಾನ್ವಿ ಭಾಗದಲ್ಲಿ ಸಕ್ರಿಯವಾಗಿ ಗುರುತಿಸಿಕೊಂಡಿದ್ದ ಇವರ ನಿರ್ಗಮನವು ಸ್ಥಳೀಯ ಜೆಡಿಎಸ್ ವಲಯದಲ್ಲಿ ಚರ್ಚೆಗೆ ದಾರಿ ಮಾಡಿಕೊಟ್ಟಿದೆ. ಮುಂಬರುವ ದಿನಗಳಲ್ಲಿ ಇವರು ಯಾವ ಪಕ್ಷ ಸೇರ್ಪಡೆಯಾಗಲಿದ್ದಾರೆ ಎಂಬುದು ಕುತೂಹಲ ಮೂಡಿಸಿದ್ದು, "ಬೆಂಬಲಿಗರೊಂದಿಗೆ ಚರ್ಚಿಸಿ ಮುಂದಿನ ನಿರ್ಧಾರ ಪ್ರಕಟಿಸುತ್ತೇನೆ," ಎಂದು ಅವರು ತಿಳಿಸಿದ್ದಾರೆ.

# ವಿಜಯನಗರ ಸಾಮ್ರಾಜ್ಯದ ಪ್ರತಿಷ್ಠಾಪನ ದಿನಾಚರಣೆ



ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತದಲ್ಲಿ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಹಾಗೂ ಕರ್ನಾಟಕ ರಾಜ್ಯ ಬೆಡರ ಸಮಿತಿ ಸಂಯುಕ್ತಾಶ್ರಯದಲ್ಲಿ ವಿಜಯನಗರ ಸಾಮ್ರಾಜ್ಯದ ಪ್ರತಿಷ್ಠಾಪನ ದಿನಾಚರಣೆಯನ್ನು ವಿಜಯನಗರ ಸಾಮ್ರಾಜ್ಯದ ಸ್ಥಾಪಕರಾದ ಹಕ್ಕಬುಕ್ಕರ ಭಾವಚಿತ್ರಕ್ಕೆ ಪುಷ್ಪವನ್ನು ಸಮರ್ಪಿಸುವ ಮೂಲಕ ಆಚರಿಸಿ ಎ.ಪಿ.ಎಂ.ಸಿ. ಮಾಜಿ ಸದಸ್ಯರಾದ ಶಿವರಾಜ ನಾಯಕ ವಕೀಲರು ಮಾತನಾಡಿ ದಕ್ಷಿಣ ಭಾರತದ ಅತ್ಯಂತ ಪ್ರಸಿದ್ಧವಾದ ಸಾಮ್ರಾಜ್ಯಗಳಲ್ಲಿ ವಿಜಯನಗರ ಸಾಮ್ರಾಜ್ಯ ಪ್ರಥಮವಾಗಿದೆ.**

ಹಕ್ಕಬುಕ್ಕರು 1336 ಏ.18 ರಂದು ವಿಜಯನಗರ ಸಾಮ್ರಾಜ್ಯವನ್ನು ಸ್ಥಾಪಿಸಿದರು ಎಂದು ನಮಗೆ ಇತಿಹಾಸದಿಂದ ತಿಳಿದುಬರುತ್ತದೆ ಅದ್ದರಿಂದ ಇಂತಹ ಇತಿಹಾಸ ಪುರುಷರನ್ನು ಸ್ಮರಿಸಿಕೊಳ್ಳುವ ಮೂಲಕ ನಮ್ಮ ಇತಿಹಾಸವನ್ನು ಮುಂದಿನ ಪೀಳಿಗೆಗೆ ತಲುಪಿಸಬೇಕಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಪುರಸಭೆ ನಾಮ ನಿರ್ದೇಶನ ಸದಸ್ಯರಾದ ಹಂಪಯ್ಯ ನಾಯಕ, ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ತಾಲೂಕು ಅಧ್ಯಕ್ಷರಾದ ದೇವು ನಾಯಕ. ತಾಲೂಕ ಪ್ರಧಾನ ಕಾರ್ಯದರ್ಶಿ ಕೊಂಡಯ್ಯ ನಾಯಕ, ನಾಯ್ಡು ನಾಯಕ, ಕರ್ನಾಟಕ ರಾಜ್ಯ ಬೆಡರ ಪಡೆ ರಾಜ್ಯಾಧ್ಯಕ್ಷರಾದ ಅಂಬಣ್ಣ ನಾಯಕ, ಸಿದ್ರಾಮಪ್ಪ ಸಾಹುಕಾರ, ಮೌನೇಶ ನಾಯಕ, ಪದಾಧಿಕಾರಿಗಳಾದ ಜೆಲ್ಲಿ ಆಂಜಿನಯ್ಯ ನಾಯಕ ನೀರಮಾನ್ವಿ, ಅಮರೇಶ ನಾಯಕ ಜಾನೇಕಲ್, ದೇವರಾಜ ನಾಯಕ ಮಾನ್ವಿ, ಚಿದಾನಂದ ನಾಯಕ, ಆಂಜನೇಯ ನಾಯಕ ನಸಲಾಪುರ,ದೇವರಾಜ ಚಿಕ್ಕ ಕೊಟ್ನೆಕಲ್, ಜಿ.ನರಸಿಂಹ ನಾಯಕ ಕರಡಿಗುಡ್ಡ ಸೇರಿದಂತೆ ಇನ್ನಿತರರು ಇದ್ದರು.

## ಆಟೋ ಮತ್ತು ಎಲ್ಲಾ ವಾಹನಗಳ ಡಾಕ್ಯುಮೆಂಟ್ ಸರಿಯಾಗಿರಲಿ: ಜಿಲ್ಲಾ ಆರ್.ಟಿಒ ರಾಕೇಶ ಎಂ.

ನೈಜ್ಯ ದೆಸೆ ನ್ಯೂಸ್



**ಸಿಂಧನೂರಿನ ಕೇಂದ್ರ ಬಸ್ ನಿಲ್ದಾಣದಲ್ಲಿ ಎಡ ಮತ್ತು ಬಲ ಭಾಗದಲ್ಲಿ ನಿಲ್ಲಿಸುವ ಆಟೋಗಳ ಚಾಲಕರನ್ನು ಕರೆದು, ನಿಮ್ಮ ನಿಮ್ಮ ಆಟೋಗಳ ಡಾಕ್ಯುಮೆಂಟ್ ಸರಿಯಾಗಿರಲಿ ಪ್ರತಿಯೊಬ್ಬ ಆಟೋ ಚಾಲಕರು ತಪ್ಪದೇ ಯೂನಿಫಾರಂ ಹಾಕಲೇಬೇಕು.**

ಸಂಬಂಧಿಸಿದ ಡಾಕ್ಯುಮೆಂಟ್ ಇನ್ಸೂರೆನ್ಸ್,ಆರ್.ಸಿ.ಬುಕ್,ಡ್ರೈವಿಂಗ್ ಲೈಸೆನ್ಸ್, ಇರಲೇಬೇಕು ಎಂದು ಆಟೋ ಚಾಲಕರಿಗೆ ಜಿಲ್ಲಾ ಆರ್.ಟಿಒ ಅಧಿಕಾರಿ ರಾಕೇಶ ಎಂ. ಏ.17 ಶುಕ್ರವಾರ ಸಂಜೆ ಹೊತ್ತಿನಲ್ಲಿ ಕೇಂದ್ರ ಬಸ್ ನಿಲ್ದಾಣಕ್ಕೆ ಆಗಮಿಸಿ, ಆಟೋ ಚಾಲಕರನ್ನು ಕರೆದು ಎಚ್ಚರಿಕೆ ನೀಡಿದರು. ಆಟೋ ಚಾಲಕರಿಂದ ಹಿಡಿದು ಎಲ್ಲಾ ವಾಹನಗಳ ಚಾಲಕರು ತಮ್ಮ ತಮ್ಮ ವಾಹನಗಳ ಡಾಕ್ಯುಮೆಂಟ್ ದಾಖಲಾತಿಗಳನ್ನು ತಪ್ಪದೇ ನಿಮ್ಮ ವಾಹನಗಳಲ್ಲಿ ಇಟ್ಟುಕೊಂಡಿರಬೇಕು. ಏನಾದರೂ ಅನಾಹುತವಾದಲ್ಲಿ ತಕ್ಷಣವೇ ಸಹಾಯಕ್ಕೆ ಬರುತ್ತದೆ. ಇಲ್ಲವಾದರೆ ನೀವು ತಲೆದಂಡ ಕೊಡಬೇಕಾಗುತ್ತದೆ. ನಾವು ಯಾವಾಗ ಬಂದು ಕೇಳಿದರೂ ನಿಮ್ಮಲ್ಲಿ ಎಲ್ಲಾ ದಾಖಲಾತಿಗಳು ಇರಬೇಕು ತಪ್ಪಿದಲ್ಲಿ ನಿಮ್ಮಗಳ ಆಟೋ ಮತ್ತು ವಾಹನಗಳನ್ನು ಸೀಜ್ ಮಾಡಲಾಗುವುದು ಎಂದರು.

# ಜಿಲ್ಲಾ ಆರೋಗ್ಯ ಸಂಘದ ಸಮನ್ವಯ ಸಮಿತಿ ಸಭೆ

## ಕುಡಿಯುವ ನೀರಿನ ಪರೀಕ್ಷೆ ಕಡ್ಡಾಯವಾಗಿ ಮಾಡಿ: ಈಶ್ವರ ಕುಮಾರ ಕಾಂದೂ

ನೈಜ್ಯ ದೆಸೆ ನ್ಯೂಸ್




**ರಾಯಚೂರು: ಬೇಸಿಗೆ ಶುರುವಾಗಿದ್ದು, ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತ್ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಪರೀಕ್ಷೆಯನ್ನು ಕಡ್ಡಾಯವಾಗಿ ಮಾಡಬೇಕೆಂದು ಪ್ರಭಾರ ಜಿಲ್ಲಾಧಿಕಾರಿ ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗ ಈಶ್ವರ ಕುಮಾರ ಕಾಂದೂ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.**

ಏಪ್ರಿಲ್ 17ರ ಶುಕ್ರವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ತುಂಗಾ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಸಂಘದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಲುಷಿತ ನೀರಿನಿಂದ ಹಲವು ಪ್ರಕರಣಗಳು ವರದಿಯಾಗುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ನೀರಿನ ಪರೀಕ್ಷೆಯನ್ನು ಕಡ್ಡಾಯಗೊಳಿಸಬೇಕು. ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಹೈಡ್ರೋಜನ್ ಕ್ಲೋರೈಡ್, ಫ್ಲೋರೈಡ್, ಐರನ್, ನೈಟ್ರೇಟ್, ಅಲ್ಕಲೈನಿಟಿ, ಕ್ಲೋರಿನಿ ಹಾಗೂ ಒಟ್ಟು ಕರಗಿದ ಘನವಸ್ತುಗಳ ಸಾಮರ್ಥ್ಯ, ಬ್ಯಾಕ್ಟೀರಿಯಾ ಹಾಗೂ ಹೈಡ್ರೋಜನ್ ಸಲ್ಫೈಡ್ ಪರೀಕ್ಷೆಯನ್ನೂ ಕೂಡ ನಡೆಸಬೇಕೆಂದರು.

ಪ್ರಸ್ತುತ ಹವಮಾನ ಬದಲಾವಣೆ ಹಾಗೂ ಪ್ರಖರ ಬಿಸಿಲಿನ ತಾಪಮಾನದಿಂದ ಪ್ರತಿಯೊಬ್ಬರ ಸುರಕ್ಷತೆಗಾಗಿ ನಿರಂತರ ಜಾಗೃತಿ, ಮತ್ತು ಎಲ್ಲ ಕುಡಿಯುವ ನೀರಿನ ಮೂಲಗಳು ಕುಡಿಯಲು ಯೋಗ್ಯವಾಗಿವೆ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು. 40 ಡಿಗ್ರಿಗಿಂತ ಹೆಚ್ಚು ಇರುವ ತಾಪಮಾನ, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಾಗುವ ಸಾಧ್ಯತೆ ಇದ್ದು, ನವಜಾತ ಶಿಶು ಹಾಗೂ ಚಿಕ್ಕ ಮಕ್ಕಳು ಗರ್ಭಿಣಿ, ಬಾಣಂತಿ, ಸೇರಿದಂತೆ ವಯೋವೃದ್ಧರು, ಧೀರ್ಘಕಾಲದಿಂದ ಖಾಯಿಲೆಗಳಿಂದ ಬಳಲುವವರು, ಹೊರ ಆವರಣದಲ್ಲಿ ದೈಹಿಕವಾಗಿ ದಿನನಿತ್ಯ ಕೆಲಸ ಮಾಡುವ ಕೂಲಿ ಕಾರ್ಮಿಕರು, ಕಟ್ಟಡ ಕಾರ್ಮಿಕರು, ಮುಂತಾದವರಿಗೆ ಹೆಚ್ಚು ಜೊಪಾನ ಮಾಡಲು ಮಧ್ಯಾನ್ನ 12 ಗಂಟೆಯಿಂದ 4 ಗಂಟೆಯವರೆಗೆ ಮನೆಯಲ್ಲಿ ಇರುವಂತೆ, ಅಗತ್ಯ ಸಂದರ್ಭದಲ್ಲಿ ಮನೆ ಹೊರಗೆ ಬರುವಾಗ, ಹತ್ತಿ ಉಡುಪು ಬಳಕೆ, ಛತ್ರಿ, ಕುಡಿಯುವ ನೀರು ಇರುವಂತೆ ಸಾರ್ವಜನಿಕರಿಗೆ ಗುಂಪು ಸಭೆ, ಸಾಮಾಜಿಕ ಜಾಲತಾಣಗಳ ಮೂಲಕ ಜಾಗೃತಿ ಹಾಗೂ ತುರ್ತು ಸಂದರ್ಭ ಎದುರಿಸಲು ತಾಲೂಕಾ ಆಸ್ಪತ್ರೆಗಳಲ್ಲಿ 5 ಐಸಿಯು ಬೆಡ್‌ಗಳ ವಾರ್ಡ್ ಸಿದ್ದಪಡಿಸಬೇಕೆಂದರು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು. ಸುರಕ್ಷಿತ ಆಹಾರ ಸೇವನೆಗೆ ಜಾಗೃತಿ : ಬೇಸಿಗೆ ಹಿನ್ನಲೆಯಲ್ಲಿ ನೀರಿನ ಮೂಲಗಳನ್ನು ನಿಯಮಿತವಾಗಿ ಪರೀಕ್ಷೆ ಹಾಗೂ ಅಸುರಕ್ಷಿತವೆಂದು ಕಂಡು ಬರುವ ಮೂಲಗಳನ್ನು ನಿಯಮಾನುಸಾರ ಕ್ಲೋರಿನೆಷನ್ ಮಾಡಿಸಲು ಎಲ್ಲ ಗ್ರಾಮ ಪಂಚಾಯತಗಳು,

ಸ್ಥಳೀಯ ಸಂಸ್ಥೆಗಳೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಿ ಯಾವುದೇ ಅವಘಡ ಸಂಭವಿಸಿದಂತೆ ಹಾಗೂ ಮುಂಜಾಗೃತಾ ಕ್ರಮಗಳ ಬಗ್ಗೆ ಜನಜಾಗೃತಿ ನೀಡಲು ಹಾಗೂ ಊಟದ ಮೊದಲು ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವನೆ ಬಗ್ಗೆ ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಲು ವ್ಯಾಪಕ ಪ್ರಚಾರ ಕೈಗೊಳ್ಳಬೇಕೆಂದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಅವರು ಮಾತನಾಡಿ, ಈಗಾಗಲೇ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ಓಆರ್‌ಎಸ್ ಪ್ಯಾಕೇಟ್ ಹಾಗೂ ತುರ್ತು ಔಷಧಿಗಳನ್ನು ದಾಸ್ತಾನು ಮಾಡಲಾಗಿದೆ. ತುರ್ತು ಸಂದರ್ಭದಲ್ಲಿ 108ಕ್ಕೆ ಕರೆ ಮಾಡಿ ಆಯಂಬ್ಯುಲೆನ್ಸ್ ಸದುಪಯೋಗಕ್ಕಾಗಿ ನಿರಂತರ ಜಾಗೃತಿ ನೀಡಲಾಗುತ್ತಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ವಿಜಯ ಶಂಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ನವೀನ್‌ಕುಮಾರ್, ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ಜಿಲ್ಲಾ ಆಯುಷ್ ಅಧಿಕಾರಿ ಡಾ.ಶಂಕರ್‌ಗೌಡ, ಡಿಪಿಡಿಓ ಡಾ.ಚಂದ್ರಶೇಖರಯ್ಯ ಸ್ವಾಮಿ, ಡಿಎಸ್‌ಓ ಹಾಗೂ ಡಿಪಿಎಮ್‌ಓ ಡಾ.ಗಣೇಶ್ ಕೆ., ಎನ್‌ಫೋರ್ಸ್‌ಮೆಂಟ್ ಅಧಿಕಾರಿ ಡಾ.ಶಿವಕುಮಾರ್ ನಾರಾ, ಡಿಟಿಓ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದೀನ್, ನಿರೂಪಣಾಧಿಕಾರಿ ಡಾ.ಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಸಭೆಯಲ್ಲಿ ಇದ್ದರು

## ನೇಮಕಾತಿ ಪ್ರಕಟಣೆ

ಬ್ಯಾಟರಾಯನಪುರ ಪ್ರಾಥಮಿಕ ಕೃಷಿ ಸಹಕಾರ ಸಂಘ ನೇಮಕಾತಿ 2026–ವಿವಿಧ ಲೆಕ್ಕಪರಿಶೋಧಕ ಹುದ್ದೆಗಳಿಗೆ ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಏಪ್ರಿಲ್ 18, 2026 ಬ್ಯಾಟರಾಯನಪುರ ಪ್ರಾಥಮಿಕ ಕೃಷಿ ಸಹಕಾರ ಸಂಘ ನೇಮಕಾತಿ 2026: ವಿವಿಧ ಲೆಕ್ಕಪರಿಶೋಧಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಬ್ಯಾಟರಾಯನಪುರ ಪ್ರಾಥಮಿಕ ಕೃಷಿ ಸಹಕಾರ ಸಂಘ ಲಿಮಿಟೆಡ್ ಏಪ್ರಿಲ್ 2026 ರ ಬ್ಯಾಟರಾಯನಪುರ ಪ್ರಾಥಮಿಕ ಕೃಷಿ ಸಹಕಾರ ಸಂಘದ ಅಧಿಕೃತ ಅಧಿಸೂಚನೆಯ ಮೂಲಕ ಅಕೌಂಟೆಂಟ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೆಂಗಳೂರು ? ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 15–ಮೇ–2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 17–04–2026 ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 15–ಮೇ–2026 ಅಧಿಸೂಚನೆ ಪ ಅಧಿಕೃತ ವೆಬ್‌ಸೈಟ್: cooperatives.gov.in

# ನೂರು ದಿನಗಳ ಕ್ಷಯಮುಕ್ತ ಅಭಿಯಾನ

## ಕ್ಷಯರೋಗ ನಿಮ್ಮ ದೇಹವನ್ನು ನಶಿಸುತ್ತದೆ ಭಯಬೇಡ ಕಫ್ ಪರೀಕ್ಷೆ ಅಗತ್ಯವಿದೆ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ಸಮೀಪದ ಜವಳಗೇರಾ ಗ್ರಾಮದ ಮಾರುತಿ ನಗರದಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ನೂರು ದಿನಗಳ ಕ್ಷಯಮುಕ್ತ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.**

ಕಾರ್ಯಕ್ರಮದ ಕುರಿತು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಮಾತನಾಡಿ ಕ್ಷಯ ರೋಗ ಒಂದು ಸಾಂಕ್ರಾಮಿಕ ರೋಗವಾಗಿದೆ ಮೈಕೋ ಬ್ಯಾಕ್ಟೀರಿಯಾ ಎಂಬ ರೋಗಾಣು ಗಾಳಿ ಮೂಲಕ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ




ಇದರಿಂದ ಕ್ಷಯರೋಗ ಬರುವ ಸಾಧ್ಯತೆ ಹೆಚ್ಚು ಕ್ಷಯರೋಗದ ಲಕ್ಷಣಗಳಾದ ಎರಡು ವಾರದ ಹೆಚ್ಚಿನ ಕೆಮ್ಮು, ಸಂಜೆ ವೇಳೆ ಹೆಚ್ಚಾಗುವ ಜ್ವರ ಹಸಿವಾಗದಿರುವುದು ದೇಹದ ತೂಕ ಕಡಿಮೆಯಾಗುವುದು ಕಫದಲ್ಲಿ ರಕ್ತ ಬರುವುದು ಎದೆ ಇವುಗಳ ಕ್ಷಯರೋಗದ ಸಾಮಾನ್ಯ ಲಕ್ಷಣಗಳಾಗಿವೆ ಈ ಲಕ್ಷಣಗಳು ಕಂಡು ಬಂದರೆ ಕೂಡಲೇ ಹತ್ತಿರದ ಆಸ್ಪತ್ರೆಯಲ್ಲಿ ಕಪಪ–ರೀಕ್ಷೆ ಮಾಡಿಸಿಕೊಂಡು ರೋಗ ಖಚಿತಪಟ್ಟರೆ ಚಿಕಿತ್ಸೆ ಪಡೆಯುವುದು ಅಗತ್ಯವಾಗಿದೆ.

ನಂತರ ಮಾತನಾಡಿದ ಸಮುದಾಯದ ಆರೋಗ್ಯ ಅಧಿಕಾರಿಗಳಾದ ಅನುಷಾ ಅವರು ಸರ್ಕಾರಿ ಆಸ್ಪತ್ರೆಯಲ್ಲಿ ಹಾಗೂ ಆರೋಗ್ಯ ಮತ್ತು ಕ್ಷೇಮ ಮಂದಿರದಲ್ಲಿ ಉಚಿತ ಪರೀಕ್ಷೆ ಮತ್ತು ಚಿಕಿತ್ಸೆಯನ್ನು ನೀಡಲಾಗುತ್ತದೆ 2030 ಒಳಗೆ ಕ್ಷಯರೋಗ ಮುಕ್ತ ಭಾರತ ಮಾಡಬೇಕಾಗಿದೆ. ಅದಕ್ಕಾಗಿ ಸಾರ್ವಜನಿಕರು ಕ್ಷಯರೋಗದ ಲಕ್ಷಣಗಳು ಕಂಡು ಬಂದರೆ ಕೂಡಲೇ ಹತ್ತಿರದ ಆಸ್ಪತ್ರೆಯಲ್ಲಿ ಪರೀಕ್ಷೆ ಮಾಡಿಸಿಕೊಳ್ಳಿ . ನೂರು ದಿನಗಳ ಅಭಿಯಾನದಲ್ಲಿ ಸಾರ್ವಜನಿಕರಿಗೆ ಆರೋಗ್ಯ ಶಿಬಿರವನ್ನು ಏರ್ಪಡಿಸಿ. ಉಚಿತ ಅಪಸನ ಶಿಬಿರಗಳನ್ನು ಹಮ್ಮಿಕೊಳ್ಳಲಾಗುತ್ತದೆ ಈ ಶಿಬಿರದ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು. ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಣಾ ಅಧಿಕಾರಿಗಳು ಅಂಬಮ್ಮ ಹಾಗೂ ಆಶಾ ಕಾರ್ಯಕರ್ತೆ ಹುಲಿಗೆಮ್ಮ, ಸಾರ್ವಜನಿಕರಾದ ಮಲ್ಲಮ್ಮ ಉಮಾದೇವಿ ವೆಂಕಟೇಶ ಶರಣಮ್ಮ ನರಸಪ್ಪ ಉಪಸ್ಥಿತರಿದ್ದರು

## ಮಸ್ಕಿ ಎಪಿಎಂಸಿ ಅಭಿವೃದ್ಧಿಗೆ ಅನುದಾನ, ಸಿಬ್ಬಂದಿ ನೀಡುವೆ: ಶಿವಾನಂದ ಪಾಟೀಲ್

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ನೂತನವಾಗಿ ರಚನೆಯಾಗಿರುವ ಮಸ್ಕಿ ಕೃಷಿ ಮಾರುಕಟ್ಟೆಗೆ ಮೂಲಭೂತ ಸೌಲಭ್ಯ ಕಲ್ಪಿಸುವ ಜತೆಗೆ ಅನುದಾನ ನೀಡುವ ಭರವಸೆಯನ್ನು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವನಾಂದ ಪಾಟೀಲ ಹೇಳಿದರು. ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಶನಿವಾರ ಭೇಟಿ ನೀಡಿ, ನೂತನ ಅಧ್ಯಕ್ಷ ಮತ್ತು ನಿರ್ದೇಶಕರಿಂದ ಸನ್ಮಾನ ಸ್ವೀಕ–ರಿಸಿದ ನಂತರ ಮಾತನಾಡಿದ ಅವರು, ಪಟ್ಟಣದಲ್ಲಿ ಕೃಷಿ ಮಾರುಕಟ್ಟೆ ಸ್ಥಾಪನೆ ಹಾಗೂ ಮೂಲಭೂತ ಸೌಲಭ್ಯ ಕಲ್ಪಿಸಬೇಕಿದೆ.**




ವಿಶೇಷವಾಗಿ ಮಾರುಕಟ್ಟೆ ಪ್ರಾಂಗಣದಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಕೃಷಿ ಮಾರುಕಟ್ಟೆ ಪ್ರದೇಶದಲ್ಲಿ ಮೂಲಭೂತ ಸೌಲಭ್ಯ ಒದಗಿಸುವುದರಿಂದ ಪಟ್ಟಣ ಅಭಿವೃದ್ಧಿ ಆಗಲಿದ್ದು, ಕೃಷಿ ಉತ್ಪನ್ನ ಮಾರುಕಟ್ಟೆ ಬಲವರ್ಧನೆಯಿಂದ ಪುರಸಭೆಗೂ ಆದಾಯ ಹೆಚ್ಚಲಿದೆ ಎಂದು ಸಚಿವರು ಅಭಿಪ್ರಾಯಪಟ್ಟರು. ಮಾರುಕಟ್ಟೆ ಪ್ರಾಂಗಣದಲ್ಲಿ ಸಿಸಿ ರಸ್ತೆ ನಿರ್ಮಾಣ, ಕಾಂಪೌಂಡ್ ಗೋಡೆ, ನೀರು, ವಿದ್ಯುತ್ ಸಂಪರ್ಕ ಸೇರಿದಂತೆ ಇತರೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಕುರಿತು ಹೆಚ್ಚುವರಿ ನಿರ್ದೇಶಕಿ ರಾಜಶ್ರೀ, ಎಇಇ ಸುಧಾರಾಣಿ ಮತ್ತು ಮಸ್ಕಿ ಕೃಷಿ ಉತ್ಪನ್ನ ಮಾರುಕಟ್ಟೆ ಕಾರ್ಯದರ್ಶಿ ಇಸ್ಮಾಯಿಲ್ ಹಾಗೂ ನಿರ್ದೇಶಕರ ಸೇರಿದಂತೆ ಇತರೆ ಅಧಿಕಾರಿಗಳೊಂದಿಗೆ ಚರ್ಚಿಸಿದರು. ತಾಲೂಕಿನ ಹಾಲಾಪೂರು, ಮುದ್ದಾಪೂರು ಮತ್ತು ಬಳಗಾನೂರು ಉಪ ಮಾರುಕಟ್ಟೆಗಳ ವ್ಯಾಪಾರ ವಾಹಿವಾಟನ್ನು ಇನ್ಮೂಂದೆ ಮಸ್ಕಿ ಪಟ್ಟಣದಲ್ಲಿ ನಡೆಸುವಂತೆ ಹೊಸದಾಗಿ ಇಲಾಖೆಯಿಂದ ನೋಟಿಫಿಕೇಷನ್ ಹೊರಡಿಸಲಾಗುತ್ತದೆ ಎಂದು ಹೇಳಿದರು. ನಿವೇಶನಗಳನ್ನು ಹಂಚಿಕೆ ಮಾಡಿ ಹಲವಾರು ವರ್ಷಗಳು ಕಳೆದರೂ ಕಟ್ಟಡ ನಿರ್ಮಾಣ ಮಾಡಿಕೊಳ್ಳದಿರುವದಕ್ಕೆ ಕಾರಣ ಕೇಳಿ ನೋಟಿಸ್ ನೀಡಲು ತಿಳಿಸಿದರು. ಈಗಾಗಲೇ ಹಂಚಿಕೆ ಮಾಡಿದ ನಿವೇಶನಗಳಲ್ಲಿ ಎಸ್ಸಿ, ಎಸ್ಟಿ ಜನಾಂಗಕ್ಕೆ ನಿವೇಶನಗಳನ್ನು ನೀಡಿಲ್ಲ. ಮುಂದಿನ ದಿನಗಳಲ್ಲಿ ಎಸ್ಸಿ, ಎಸ್ಟಿ ಜನಾಂಗಕ್ಕೆ ನಿವೇಶನಗಳನ್ನು ನೀಡಲು ಸೂಚಿಸಿದರು. ಈ ಸಂದರ್ಭದಲ್ಲಿ ಶಾಸಕ ಆರ್.ಬಸನಗೌಡ ತುರವಿಹಾಳ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್, ನಲ್ಲಾ ವೆಂಕಟೇಶ್ವರಾವ್ ಸೇರಿದಂತೆ ಎಪಿಎಂಸಿ ನಿರ್ದೇಶಕರು, ಕಾಂಗ್ರೆಸ್ ಮುಖಂಡರು ಸೇರಿದಂತೆ ಇನ್ನಿತರರಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಸಿರವಾರದಲ್ಲಿ 100 ಫಲಾನುಭವಿಗಳಿಗೆ ಕೊಳವೆಬಾವಿ, ಪಂಪ್–ಮೋಟರ್ ವಿತರಣೆ






ನೈಜ್ಯ ದೆಸೆ ನ್ಯೂಸ್

**ಸಿರವಾರ: ಮಾನ್ವಿ ವಿಧಾನಸಭಾ ಕ್ಷೇತ್ರವ್ಯಾಪ್ತಿಯ ಸಿರವಾರ ಪಟ್ಟಣದಲ್ಲಿ ಸಣ್ಣ ನೀರಾವರಿ ಹಾಗೂ ಅಂತರ್ಜಲ ಅಭಿವೃದ್ಧಿ ಇಲಾಖೆಯ ಸಹಯೋಗದಲ್ಲಿ ಎಸ್‌ಸಿಪಿ?ಟಿ–ಎಸ್‌ಪಿ 2025–26ನೇ ಸಾಲಿನ ಯೋಜನೆಯಡಿ 100 ಜನ ಫಲಾನುಭವಿಗಳಿಗೆ ಕೊಳವೆಬಾವಿ ಕೊರೆಸಿಕೊಂಡು ಪಂಪ್ ಮತ್ತು ಮೋಟರ್‌ಗಳನ್ನು ವಿತರಿಸಲಾಯಿತು.**

ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಪರಿಷತ್ತಿನ ಸಭಾ ನಾಯಕ ಎನ್. ಎಸ್. ಬೋಸರಾಜು ಹಾಗೂ ಮಾನ್ವಿ ಕ್ಷೇತ್ರದ ಶಾಸಕ ಜಿ. ಹಂಪಯ್ಯ ನಾಯಕ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಫಲಾನುಭವಿಗಳಿಗೆ ಸೌಲಭ್ಯಗಳನ್ನು ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು ಮತ್ತು ಶಾಸಕರು, ಸರ್ಕಾರದ ಯೋಜನೆಗಳು ಜನರಿಗೆ ಸಮರ್ಪಕವಾಗಿ ತಲುಪಿದಾಗ ಮಾತ್ರ ಅಭಿವೃದ್ಧಿ ಕಾರ್ಯಗಳು ಅರ್ಥ–ಪೂರ್ಣವಾಗುತ್ತವೆ ಎಂದು ತಿಳಿಸಿದರು.

ಕಾಂಗ್ರೆಸ್ ಸರ್ಕಾರದ ನೇತೃತ್ವದಲ್ಲಿ ಮಾನ್ವಿ ಕ್ಷೇತ್ರ ಸೇರಿದಂತೆ ಜಿಲ್ಲೆಯಲ್ಲಿ ಹಲವು ಏತ ನೀರಾವರಿ ಯೋಜನೆಗಳು ಪ್ರಗತಿಯಲ್ಲಿದ್ದು, ನಾರಾಯಣಪುರ ಜಲಾಶಯದಿಂದ ಟೇಲ್‌ಎಂಡ್ ರೈತರಿಗೆ ನೀರು ತಲುಪಿಸುವ ಮಹತ್ವಾಕಾಂಕ್ಷಿ ಯೋಜನೆಗೆ ಶೀಘ್ರದಲ್ಲೇ ಸಚಿವ ಸಂಪುಟ ಅನುಮೋದನೆ ಪಡೆಯಲಾಗುತ್ತದೆ ಎಂದರು. ಇದ–ರಿಂದ ರೈತರಿಗೆ ಎರಡು ಬೆಳೆಗೆ ಸಮರ್ಪಕ ನೀರಾವರಿ ಸೌಲಭ್ಯ ದೊರೆಯಲಿದೆ ಎಂದು ಹೇಳಿದರು. ತುಂಗಭದ್ರಾ ಜಲಾಶಯದ 32 ಗೇಟುಗಳ ನವೀಕರಣ ಕಾರ್ಯ ಮುಂದಿನ ತಿಂಗಳೊಳಗೆ ಪೂರ್ಣಗೊಳ್ಳಲಿದ್ದು, ಜಲಾಶಯವು ಸಂಪೂರ್ಣ ನೀರು ಸಂಗ್ರಹ ಸಾಮರ್ಥ್ಯವನ್ನು ಮರುಪಡೆಯಲಿದೆ ಎಂದು ಸಚಿವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಡಿ. ಎಸ್. ಹುಲಿಗೇರಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚುಕ್ಕಿ ಶಿವಕುಮಾರ್, ಬ್ರಿಜೇಶ್ ಪಾಟೀಲ್, ಕಿರಲಿಂಗಪ್ಪ ಕವಿತಾಳ್, ಪಟ್ಟಣ ಪಂಚಾಯಿತಿ ಅಧ್ಯಕ್ಷ ಹಾಜಿ ಚೌದ್ರಿ, ತಾಲೂಕು ದಂಡಾಧಿಕಾರಿ ಅಶೋಕ್ ಪವಾರ್, ಎಇಇ ಲೋಕೇಶ್ ಕುಮಾರ್ ಸೇರಿದಂತೆ ಹಲವು ಮುಖಂಡರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

## ದೇವದುರ್ಗ ಬಸ್ ಡಿಪ್ಪೋ ಅಧಿಕಾರಿಗಳ ನಿರ್ಲಕ್ಷ್ಯ: ಬಿಸಿಲಲ್ಲಿ ಪ್ರಯಾಣಿಕರು ಹೈರಾಣ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ದೇವದುರ್ಗ ತಾಲೂಕಿನ ಕಲ್ಯಾಣ ಕರ್ನಾಟಕ ಸಾರಿಗೆ ವಿಭಾಗಕ್ಕೆ ಸೇ–ರಿದ ದೇವದುರ್ಗ ಬಸ್ ಡಿಪ್ಪೋದಲ್ಲಿ ನಿರ್ಲಕ್ಷ್ಯದ ಘಟನೆ ಬೆಳಕಿಗೆ ಬಂದಿದೆ.**

ದೇವದುರ್ಗದಿಂದ ಕರಿಗುಡ್ಡ ಕಡೆಗೆ ಸಾಗುತ್ತಿದ್ದ (ಏಂ 36 ಈ 1161) ಸಂಖ್ಯೆಯ ಬಸ್, ದೇವದುರ್ಗ?ಲಿಂಗಸೂರು ಮಾರ್ಗದಲ್ಲಿ ಮಧ್ಯ ದಾರಿಯಲ್ಲಿ ನಿಂತಿದೆ. ಬಸ್ ಕಂಡಕ್ಟರ್ ಬಳಿಯ ಟಿಕೆಟ್ ನೀಡುವ ಮಷಿನ್ ಕೆಟ್ಟಿರುವುದ–ರಿಂದ ಸೇವೆ ಸ್ಥಗಿತಗೊಂಡಿದ್ದು, ಪ್ರಯಾಣಿಕರು ಬಿಸಿಲಿನಲ್ಲಿ ಸಂಕಷ್ಟ ಅನುಭವಿಸುವಂತಾಗಿದೆ. 44 ಡಿಗ್ರಿ ಸೆಲ್ಸಿಯಸ್ ತಾಪಮಾನದಲ್ಲಿ ಪ್ರಯಾಣಿಕರು ಬಿಸಿಲಿನಲ್ಲಿ ಪರದಾಡುವ




ಪರಿಸ್ಥಿತಿ ನಿರ್ಮಾಣವಾಗಿದ್ದು, ಸಾರಿಗೆ ಇಲಾಖೆಯ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಟಿಕೆಟ್ ಮಷಿನ್ ದೋಷ ಉಂಟಾದ ತಕ್ಷಣವೇ ಪರ್ಯಾಯ ವ್ಯವಸ್ಥೆ ಮಾಡಬೇಕಾಗಿ–ತ್ತು ಎಂಬ ಅಭಿಪ್ರಾಯ ವ್ಯಕ್ತವಾಗಿದ್ದು, ವಾಹನಗಳ ನಿರ್ವಹಣೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು ಎಂದು ಪ್ರಯಾಣಿಕರು ಒತ್ತಾಯಿಸಿದ್ದಾರೆ. ನೈಜ ದೆಸೆ ಕನ್ನಡ ಪತ್ರಿಕೆ ವರದಿಗಾರರು ಡಿಪ್ಪೋ ಮ್ಯಾನೇಜರ್ ಅವರನ್ನ ಫೋನ್ ಮುಖಾಂತರ ಮಾತನಾಡಿ ಘಟನೆಯನ್ನು ವಿವರಿಸಿದಾಗ ಇಂಥ ಘಟನೆ ಮರುಕಳಿಸದಂತೆ ಮುನ್ನೆಚ್ಚರಿಕೆ ವಹಿಸುತ್ತೇವೆ ಎಂದು ಹೇಳಿದರು ಸಂಬಂಧಪಟ್ಟ ಸಾರಿಗೆ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ತಕ್ಷಣವೇ ಗಮನಹರಿಸಿ, ಈ ರೀತಿಯ ಘಟನೆಗಳು ಮರುಕಳಿಸದಂತೆ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಈ ಸಂದರ್ಭದಲ್ಲಿ ರಾಮನಗೌಡ ಮಾಲಿ ಪಾಟೀಲ್, ಇಮಾಮ್ ಸಾಬ್, ಹಾಜಿ ಅಲಿ ಸೇರಿದಂತೆ ಸ್ಥಳೀಯರು ಉಪಸ್ಥಿತರಿದ್ದರು.

## ಜಾಲಹಳ್ಳಿ 8 ಮತ್ತು 9 ವಾರ್ಡಿನಲ್ಲಿ ಜೆಜೆಎಂ ಕಾಮಗಾರಿಗಾಗಿ ರೋಡ್ ಆಗೆದು ಅವಾಂತರ ಸೃಷ್ಟಿ



ನೈಜ್ಯ ದೆಸೆ ನ್ಯೂಸ್

**ದೇವದುರ್ಗ: ತಾಲೂಕಿನ ಜಾಲಹಳ್ಳಿ ಗ್ರಾಮದಲ್ಲಿ ವಾರ್ಡ್ ಸಂಖ್ಯೆ 8 ಮತ್ತು 9ರಲ್ಲಿ ಜಲಧಾರೆ ಯೋಜನೆ (ಜೆಜೆಎಂ) ಕಾಮಗಾ–ರಿಯ ನಿಮಿತ್ತ ಮುಖ್ಯ ಸಂಪರ್ಕ ರಸ್ತೆಯನ್ನು ಅಗೆದು ಬಿಟ್ಟು ಹೋಗಿರುವುದರಿಂದ ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟಾಗಿದೆ.**

ಸ್ಥಳೀಯರ ಪ್ರಕಾರ, ಈ ರಸ್ತೆ ಪ್ರಮುಖ ಸಂಪರ್ಕ ಮಾರ್ಗವಾಗಿದ್ದು, ಕಾಮಗಾರಿ ನಡೆಸಿದ ನಂತರ ಸರಿಯಾಗಿ ಮರುಸ್ಥಾಪನೆ ಮಾಡದೆ ಬಿಟ್ಟಿರುವುದರಿಂದ ಜನರಿಗೆ ಸಂಚಾರ ಕಷ್ಟವಾಗಿದ್ದು, ಅಪಘಾತಗಳ ಭೀತಿ ಹೆಚ್ಚಾಗಿದೆ. ಎರಡು ತಿಂಗಳು ಕಳೆದರೂ ಅನೇಕ ಬಾರಿ ತಿಳಿಸಿದ್ದರೂ ರಸ್ತೆ ದುರಸ್ತಿ ಕಾರ್ಯ ಕೈಗೊಳ್ಳಲಾಗಿಲ್ಲ ಎಂದು ಆರೋಪಿಸಲಾಗಿದೆ.

ಈ ಕುರಿತು ಗ್ರಾಮ ಪಂಚಾಯಿತಿ PDO ಅವರ ಗಮನಕ್ಕೂ ವಿಷಯ ತರಲಾಗಿದ್ದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಮಾಜಿ ಕೆಡಿಪಿ ನಾಮನಿರ್ದೇಶಿತ ಸದಸ್ಯರಾದ ಶಶಿಕಲಾ ಚೆನ್ನಬಸವ ಚೌದ್ರಿ ಆರೋಪಿಸಿದ್ದಾರೆ. ತಕ್ಷಣ ರಸ್ತೆ ಸರಿಪಡಿಸದಿದ್ದಲ್ಲಿ ಗ್ರಾಮ ಮಹಿಳೆಯರು ಒಟ್ಟಾಗಿ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಈ ಬಗ್ಗೆ ನೈಜ ದೆಸೆ ಕನ್ನಡ ದಿನಪತ್ರಿಕೆಯ ವರದಿಗಾರರು ೦ಇಇ ಹಿರಲಾಲ್ ಮೋತಿಕರ್ ಅವರನ್ನು ಸಂಪರ್ಕಿಸಿದಾಗ, ಸೈಟ್ ಇಂಜಿನಿಯರ್ ಬಸವರಾಜ್ ಅವರ ನಿರ್ಲಕ್ಷದಿಂದ ಈ ಸಮಸ್ಯೆ ಉಂಟಾಗಿದ್ದು, ಶೀಘ್ರದಲ್ಲೇ ರಸ್ತೆ ಸರಿಪಡಿಸುವುದಾಗಿ ಅವರು ತಿಳಿಸಿದ್ದಾರೆ. ಒಂದು ದಿನದ ಒಳಗೆ ಎಲ್ಲಾ ಕಾಮಗಾರಿ ಪೂರ್ಣಗೊಳಿಸಿಕೊಡುವುದಾಗಿ ಹೇಳಿದರು ಜಲಧಾರ ಯೋಜನೆ ಶಂಕರ್ ನಾರಾಯಣ ಕಂಪನಿ ಸಿರವಾರ ಅವರ ಗುತ್ತಿಗೆ ಪಡೆದು ಕೊಂಡಿದ್ದಾರೆ ಎಂದು ಹೇಳಿದರು.

## ಏಪ್ರಿಲ್ 23, 24ರಂದು ಸಿಇಟಿ ಪರೀಕ್ಷೆ: ವ್ಯವಸ್ಥಿತವಾಗಿ ನಿರ್ವಹಣೆಗೆ ಅಪರ ಜಿಲ್ಲಾಧಿಕಾರಿ ಶಿವಾನಂದ ಸೂಚನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: 2025–2026ನೇ ಸಾಲಿನ ವೃತ್ತಿಪರ ಕೋರ್ಸಗಳ ಪ್ರವೇಶಕ್ಕಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಗಳು ಇದೇ ಏಪ್ರಿಲ್ 23 ಹಾಗೂ 24ರಂದು ಜಿಲ್ಲೆಯ 19 ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷೆಗಳು ವ್ಯವಸ್ಥಿತವಾಗಿ ನಡೆಯಲು ಅಗತ್ಯವಿರುವ ಸಕಲ ಏರ್ಪಾಡುಗಳನ್ನು ಮಾಡಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.**

ಏಪ್ರಿಲ್ 18ರ ಶನಿವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಿಇಟಿ ಪರೀಕ್ಷೆ ಕುರಿತು ಪೂರ್ವಭಾವಿ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಿಇಟಿ ಪರೀಕ್ಷೆಯಲ್ಲಿ ಮತ್ತಷ್ಟು ಪಾರದರ್ಶಕತೆಯನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಫ್ರಿಸ್ಕಿಂಗ್, ಫೇಸ್ ರೆಕಗ್ನಿಶನ್ ಸೌಲಭ್ಯವನ್ನು ಮಾಡಲಾಗುತ್ತದೆ. ಪರೀಕ್ಷಾ ಮುನ್ನಾದಿನ




ಪ್ರಾತ್ಯಕ್ಷಿಕೆಯ ಮೂಲಕ ಖಚಿತ ಪಡಿಸಿಕೊಳ್ಳಬೇಕೆಂದು ಪರೀಕ್ಷಾ ಕೇಂದ್ರದ ಸಂಬಂಧಿಸಿದ ಅಧಿಕಾ–ರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು. ವಿಜ್ಞಾನ ಉಪನ್ಯಾಸಕರನ್ನು ಕೊಠಡಿ ಮೇಲ್ವಿಚಾರಕರಾಗಿ ನೇಮಿಸಬಾರದು. ವಿಜ್ಞಾನವನ್ನು ಹೊರತುಪಡಿಸಿ ಇತರ ವಿಷಯದ ಉಪನ್ಯಾಸಕರನ್ನು ನೇಮಿಸಿಕೊಳ್ಳಬಹುದು.

ಪ್ರತಿ 24 ಅಭ್ಯರ್ಥಿಗಳಿಗೆ ಒಬ್ಬರಂತೆ ಅವಶ್ಯವಿರುವಷ್ಟು ಕೊಠಡಿ ಮೇಲ್ವಿಚಾರಕರನ್ನು ನೇಮಿಸಬೇಕು. ಅಲ್ಲದೆ ಕೊಠಡಿ ಮೇಲ್ವಿಚಾರಕರಿಗೆ ಕೊಠಡಿ ನಿಯೋಜನೆಯನ್ನು ವೀಕ್ಷಕರ ಸಮ್ಮುಖದಲ್ಲಿ ಲಾಟರಿ ಮೂಲಕ ಮಾತ್ರ ಮಾಡಬೇಕು. ಪರೀಕ್ಷೆ ಪ್ರಾರಂಭವಾಗುವ ಮೊದಲು ಪ್ರತಿ ಅವಧಿಗೆ ಪ್ರತ್ಯೇಕ ಲಾಟರಿಗಳನ್ನು ಮಾಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಪರೀಕ್ಷೆ ಕೇಂದ್ರದಲ್ಲಿ ಶೌಚಾಲಯ ಸ್ವಚ್ಛವಿರಬೇಕು. ಪರೀಕ್ಷಾ ಕೇಂದ್ರದೊಳಗೆ ಕೈ ಗಡಿಯಾರ ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಕೊಠಡಿಯ ಗೋಡೆ ಮೇಲೆ ಗಡಿಯಾರ ಹಾಕಬೇಕು. ಪ್ರತಿ ಕೊಠಡಿಯಲ್ಲಿ 24 ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶ ನೀಡಲಾಗಿದೆ.

ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಪಿಠೋಪಕರಣ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದರು. ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಜಿಲ್ಲೆಯಲ್ಲಿ ಸಿಇಟಿ ಕೋರ್ಸ್‌ಗಳ ಪ್ರವೇಶಾತಿ ಪರೀಕ್ಷೆಗಳನ್ನು ಯಶಸ್ವಿಯಾಗಿ ನಿರ್ವಹಿಸಲು ಪೊಲೀಸ್ ಇಲಾಖೆಯಿಂದ ಸಂಪೂರ್ಣ ಭದ್ರತೆ ಹಾಗೂ ಸಹಕಾರ ನೀಡಲಾಗುವುದು ಎಂದರು.

6,564 ಅಭ್ಯರ್ಥಿಗಳು ನೋಂದಣಿ: ಜಿಲ್ಲೆಯಲ್ಲಿ ಇದೇ ಏಪ್ರಿಲ್ 23 ಹಾಗೂ 24ರಂದು ವೃತ್ತಿಪರ ಕೋರ್ಸಗಳ ಪ್ರವೇಶಕ್ಕಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷೆಗಾಗಿ ರಾಯಚೂರು ನಗರದಲ್ಲಿ 19ಕೇಂದ್ರಗಳನ್ನು ಗುರುತಿಸಲಾಗಿದೆ.

ಪರೀಕ್ಷೆಗೆ 6564 ಅಭ್ಯರ್ಥಿಗಳಿಂದ ನೋಂದಣಿಯನ್ನು ಮಾಡಲಾಗಿದೆ. ಏಪ್ರಿಲ್ 23ರ ಬೆಳಿಗ್ಗೆ 10.30ರಿಂದ 11.50ರವರೆಗೆ ಭೌತಶಾಸ್ತ್ರ ಹಾಗೂ ಮಧ್ಯಾಹ್ನ 2.30ರಿಂದ 3.50ರವರಗೆ ರಸಾಯನ ಶಾಸ್ತ್ರ ಪರೀಕ್ಷೆ ನಡೆಯಲಿದೆ. ಏಪ್ರಿಲ್ 24ರ ಬೆಳಿಗ್ಗೆ 10.30ರಿಂದ 11.50ರವರೆಗೆ ಗಣಿತ ಶಾಸ್ತ್ರ, ಹಾಗೂ ಮಧ್ಯಾಹ್ನ 2.30ರಿಂದ 3.50ರವರಗೆ ಜೀವಶಾಸ್ತ್ರ ಪರೀಕ್ಷೆ ನಡೆಯಲಿದೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸೋಮಶೇಖರ ಹೊಕ್ರಾಣಿ ಅವರು ಸಭೆಗೆ ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ರಾಯಚೂರು ಡಿವೈ–ಎಸ್ಪಿ ಶಾಂತಮೂರ್ತಿ ಸೇರಿದಂತೆ ಜಿಲ್ಲೆಯ ವಿವಿಧ ಕಾಲೇಜಿನ ಪ್ರಾಂಶುಪಾಲರು, ವೃತ್ತಿಪರ ಕೋರ್ಸಗಳ ಸಾಮಾನ್ಯ ಪ್ರವೇಶ ಪರೀಕ್ಷೆಯ ಕೊಠಡಿ ಮೇಲ್ವಿಚಾರಕರು, ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಬಿ.ಟೆಕ್ ಇನ್ ಕೆಮಿಕಲ್ ಎಂಜಿನಿಯರಿಂಗ್

ಬಿ.ಟೆಕ್ ಇನ್ ಕೆಮಿಕಲ್ ಎಂಜಿನಿಯರಿಂಗ್ ಕೋರ್ಸ್‌ನಲ್ಲಿ ರಸಾಯನಶಾಸ್ತ್ರ, ಭೌತಶಾಸ್ತ್ರ ಹಾಗೂ ಜೀವಶಾಸ್ತ್ರದ ತತ್ವಗಳನ್ನು ಬಳಸಿಕೊಂಡು ದೊಡ್ಡ ಪ್ರಮಾಣದಲ್ಲಿ ರಾಸಾಯನಿಕ ಉತ್ಪಾದನೆಗೆ ಅಗತ್ಯವಾದ ಪ್ರಕ್ರಿಯೆಗಳ ವಿನ್ಯಾಸ ಹಾಗೂ ಅಭಿವೃದ್ಧಿಯನ್ನು ಕಲಿಸಲಾಗುತ್ತದೆ. ಈ ಕೋರ್ಸ್‌ನಲ್ಲಿ ವಿದ್ಯಾರ್ಥಿಗಳು ಥರ್ಮೋಡೈನಾಮಿಕ್ಸ್, ದ್ರವ್ಯರಾಶಿ ಮತ್ತು ಶಾಖ ವರ್ಗಾವಣೆ, ದ್ರವ ಯಂತ್ರಶಾಸ್ತ್ರ ಹಾಗೂ ಪ್ರಕ್ರಿಯೆ ನಿಯಂತ್ರಣ ವಿಷಯಗಳನ್ನು ಆಳವಾಗಿ ಅಧ್ಯಯನ ಮಾಡುತ್ತಾರೆ. ಆಸ್ಪೆನ್ ಪ್ಲಸ್, ಕೆಮ್‌ಕ್ಯಾಡ್ ಮತ್ತು ಊಜಖಜಖ ಮೊದಲಾದ ಕೈಗಾರಿಕಾ ಸಾಫ್ಟ್‌ವೇರ್‌ಗಳನ್ನು ಬಳಸುವ ಪ್ರಾಯೋಗಿಕ ಜ್ಞಾನವನ್ನು ವಿದ್ಯಾರ್ಥಿಗಳು ಪಡೆಯುತ್ತಾರೆ. ಈ ಪದವಿಯನ್ನು ಪೂರ್ಣಗೊಳಿಸಿದ ನಂತರ ರಾಸಾಯನಿಕ ಎಂಜಿನಿಯರ್‌ಗಳು ಔಷಧ ನಿರ್ಮಾಣ, ಪೆಟ್ರೋಕೆಮಿಕಲ್ ಹಾಗೂ ಆಹಾರ ಸಂಸ್ಕರಣಾ ಕೈಗಾರಿಕೆಗಳಲ್ಲಿ ಪ್ರಕ್ರಿಯೆ ಎಂಜಿನಿಯರ್, ಸುರಕ್ಷತಾ ಅಧಿಕಾರಿ ಸೇರಿದಂತೆ ವಿವಿಧ ಹುದ್ದೆಗಳಲ್ಲಿ ಉದ್ಯೋಗಾವಕಾಶಗಳನ್ನು ಪಡೆಯುತ್ತಾರೆ. ಬಿ.ಟೆಕ್ ಇನ್ ಕೆಮಿಕಲ್ ಎಂಜಿನಿಯರಿಂಗ್ (B.Tech Chemical Engineering) ಪ್ರವೇಶ ಅರ್ಹತೆ (Eligibility)? ಕನ್ನಡದಲ್ಲಿ , ಶೈಕ್ಷಣಿಕ ಅರ್ಹತೆ ಪಿಯುಸಿ / 12ನೇ ತರಗತಿ (Science Stream) ಉತ್ತೀರ್ಣರಾಗಿರಬೇಕು

## ಬೇಜವಾಬ್ದಾರಿಯಿಂದ ಕಾರ್ಯನಿರ್ವಹಿಸಿದರೆ ತಕ್ಷಣವೇ ಸಸ್ಪೆಂಡ್ :ಶಾಸಕ ವಜ್ಜಲ್

ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಪುರಸಭೆ ವ್ಯಾಪ್ತಿಯ ಕುಡಿಯುವ ನೀರು, ಕಸ ವಿಲೇವಾರಿ, ಚರಂಡಿಗಳ ಸ್ವಚ್ಛತೆ, ಬೀದಿ ದನಗಳ ಹಾವಳಿ, ಬೀದಿ ನಾಯಿಗಳ ನಿಯಂತ್ರಣ ಸೇರಿದಂತೆ ಎಲ್ಲಾ ವಾರ್ಡುಗಳಲ್ಲಿ ಹಲವಾರು ಸಮಸ್ಯೆ ಗಳ ಕುರಿತು ದಿನಾಲು ನೂರಾರು ದೂರವಾಣಿ ಕರೆಗಳು ಮಾಡಿ ಜನತೆ ತಮ್ಮ ಸಮಸ್ಯೆಗಳನ್ನು ಹೇಳುತ್ತಿದ್ದು ಸಂಬಂಧಿಸಿದ ಪುರಸಭೆ ಅಧಿಕಾರಿಗಳು ಏನು ಮಾಡುತ್ತಿದ್ದೀರಿ..? ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವುದನ್ನು ಕಲಿತು ಕೊಳ್ಳಿ. ನೀವು ಇದೇ ರೀತಿ ಬೇಜವಾಬ್ದಾರಿಯಿಂದ ಕಾರ್ಯನಿರ್ವಹಿಸಿದರೆ ತಕ್ಷಣವೇ ನಿಮ್ಮನ್ನು ಸಸ್ಪೆಂಡ್ ಮಾಡಿ ಮನೆಗೆ ಕಳುಹಿಸಬೇಕಾಗುತ್ತದೆ ಎಂದು ಶಾಸಕ ಮಾನಪ್ಪ ವಜ್ಜಲ್ ಅವರು ಪುರಸ ಭೆಯ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಖಡಕ್ಕಾಗಿ ಎಚ್ಚರಿಕೆ ನೀಡಿದರು.**




ಅವರಿಂದು ಪುರಸಭೆಯ ಸಭಾಂಗಣದಲ್ಲಿ ನಡೆದ ಸಿಬ್ಬಂದಿಗಳ ಸಭೆಯ ಅಧ್ಯಕ್ಷತೆ ಯನ್ನು ವಹಿಸಿ ಮಾತನಾಡಿದ ಅವರು ಪುರಸಭೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿಗಾಗಿ 80 ಎಕರೆಯಷ್ಟು ನೀರು ಸಂಗ್ರಹ ಮಾಡುವ ದೊಡ್ಡ ಪ್ರಮಾಣದ ಕೆರೆ ಇದ್ದು ಒಟ್ಟು ಏಳು ಟ್ಯಾಂಕ್ ಗಳಿದ್ದು , 105 ಬೋರ್ ವೆಲ್ ಗಳಿದ್ದು 04 ಹ್ಯಾಂಡ್ ಪಂಪುಗಳಿದ್ದರೂ ಸಹ ನಾಲ್ಕು ದಿನಗಳಿಗೊಮ್ಮೆ ಕುಡಿಯುವ ನೀರನ್ನು ಒದಗಿಸುತ್ತೀರಿ ಬೇಸಿಗೆ ದಿನಗಳಲ್ಲಿ ಈ ರೀತಿ ಕುಡಿಯುವ ನೀರಿನ ಅಭಾವ ಸೃಷ್ಟಿಯಾದರೆ ಹೇಗೆ ಜನ ಸುಮ್ಮನಿರು ತ್ತಾರೆ..? ನಿಮಗಿಷ್ಟ ಬಂದ ಹಾಗೆ ನೀರು ಬಿಡುತ್ತೀರಿ ನಾರಾಯಣಪುರ ಡ್ಯಾಮ್ ನಿಂದ ಕುಡಿಯುವ ನೀರು ಬಿಡಿಸುವ ಜವಾಬ್ದಾರಿ ನನ್ನದು.

ನೀವು ಸರಿಯಾದ ರೀತಿಯಲ್ಲಿ ಕಾರ್ಯ ನಿರ್ವಹಣೆ ಮಾಡದೇ ಅಧಿಕಾರಿಗಳು ತಾಲೂಕಿನ ಹೆಸರನ್ನು ಹಾಳು ಮಾಡುತ್ತಿದ್ದೀರಿ. ಪ್ರತಿಯೊಂದು ವಾರ್ಡ್ ಗಳ ಜನತೆ ಕುಡಿಯುವ ನೀರಿಗಾಗಿ ನಮ್ಮ ಮನೆಯ ಮುಂದೆ ಬಂದು ಕೂಡು ತ್ತಾರೆ. ಅವರಿಗೆ ನಾನೇನು ಉತ್ತರ ನೀಡ ಬೇಕು. ಇಂದಿನಿಂದ ಪ್ರತಿನಿತ್ಯ ನೀರು ಒದಗಿಸುವ ಕೆಲಸ ಮಾಡಬೇಕು. ಇಲ್ಲದಿದ್ದರೆ ನಿಮ್ಮ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕಾಗುತ್ತದೆ.

ಕೆಲವು ವಾರ್ಡ್ಗಳಲ್ಲಿ ಚರಂಡಿಗಳ ಸ್ವಚ್ಛತೆ, ರಾತ್ರಿ ವೇಳೆ ಕಾರ್ಯನಿರ್ವ ಹಿಸದ ಬೀದಿ ದೀಪ, ರಸ್ತೆ ಬದಿಯಲ್ಲಿ ದಿನನಿತ್ಯ ವಾಹನ ಸವಾರರಿಗೆ ಅಡ್ಡಾದಿಡ್ಡಿ ಯಾಗಿ ಮಲಗುವ ಬೀಡಾಡಿ ದನಗಳ ಹಾವಳಿ ಬಗ್ಗೆ ಹಾಗೂ ಬೀದಿ ನಾಯಿಗಳ ನಿಯಂತ್ರಣ ಕು- ರಿತು, ಸರಿಯಾಗಿ ವಾರ್ಡ್ಗ ಳಲ್ಲಿ ಕಸವಿಲೇವಾರಿ ಯಾಗದ ಕುರಿತು ಅನೇಕ ದೂರುಗಳು ಕೇಳಿ ಬಂದಿದ್ದು ಕೂಡಲೇ ಈ ಎಲ್ಲಾ ಸಮಸ್ಯೆಗಳನ್ನು ಪರಿಹರಿಸಬೇಕೆಂದು ಅಧಿಕಾರಿಗಳಿಗೆ ಕಟ್ಟಪ್ಪಣೆ ಮಾಡಿದರು. ಪುರಸಭೆ ವ್ಯಾಪ್ತಿ ಯಲ್ಲಿ 230 ಉದ್ಯಾನವನಗಳಿವೆ. ಕೆಲವು ಉದ್ಯಾನವನಗಳ ಸ್ಥಳ ಮಾರಾಟ ಮಾಡಲಾಗಿದೆ ಎಂಬ ದೂರು ಬಂದಿದ್ದು ಪಟ್ಟ ಣದಲ್ಲಿರುವ ರಾಜಕಾಲುವೆ ಒತ್ತುವರಿ ಮಾಡಿ ಕೆಲವರು ಕಾಲುವೆಯ ಮೇಲ್ಗಡೆ ಮನೆಗಳನ್ನು ಕಟ್ಟಿಕೊಂಡಿದ್ದಾರೆ.

ಎಲ್ಲಾ ಉದ್ಯಾನವನಗಳು ಅಭಿವೃದ್ಧಿಯಾಗಬೇ ಕಾಗಿದೆ. ಖಾಸಗಿ ವ್ಯಕ್ತಿಗಳು ಉದ್ಯಾನವನ ಹಾಗೂ ರಾಜ ಕಾಲುವೆಗಳನ್ನು ಒತ್ತುವರಿ ಮಾಡಿದರೆ ಅಭಿವೃದ್ಧಿಯಾಗಲು ಹೇಗೆ ಸಾಧ್ಯ ಪುರಸಭೆಗೆ ಸಂಬಂಧಿಸಿದ ವಾಣಿಜ್ಯ ಮಳಿಗೆಗಳ ವಿವರ ಸರ್ಕಾರಿ ಆಸ್ತಿಗಳ ಬಗ್ಗೆ ಸಂಪೂರ್ಣವಾದ ಮಾಹಿತಿ ಕೊಡಿ ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು. ಈ ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಬಸವಣ್ಣೆಪ್ಪ ಕಲಶೆಟ್ಟಿ ಪುರಸಭೆ ಮುಖ್ಯಾಧಿಕಾರಿ ಕೆ ನಟರಾಜ್ ಸೇರಿದಂತೆ ಪುರಸಭೆಯ ವಿವಿಧ ವರ್ಗದ ಅಧಿಕಾ- ರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಮ್ಯಾನ್‌ಹೋಲ್ ಸ್ವಚ್ಛತೆಗೆ ಮಾನವ ಸಂಪನ್ಮೂಲ ಬಳಕೆ ನಿಷೇಧ: ಉಲ್ಲಂಘಿಸುವವರ ವಿರುದ್ಧ ಕಾನೂನು ಕ್ರಮ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ನಗರದ ವ್ಯಾಪ್ತಿಯಲ್ಲಿ ಮ್ಯಾನ್‌ಹೋಲ್ ಹಾಗೂ ಸೆಪ್ಟಿಕ್ ಟ್ಯಾಂಕ್‌ಗಳ ಸ್ವಚ್ಛತೆಗಾಗಿ ಯಾವುದೇ ಕಾರಣಕ್ಕೂ ಮಾನವ ಸಂಪನ್ಮೂಲವನ್ನು ಬಳಸಬಾರದು ಎಂದು ರಾಯಚೂರು ಮಹಾನಗರ ಪಾಲಿಕೆ ಸಾರ್ವಜನಿಕರಲ್ಲಿ ಮನವಿ ಮಾಡಿದೆ.**

ಮ್ಯಾನ್‌ಹೋಲ್ ಸ್ವಚ್ಛತೆಗೆ ಕಾರ್ಮಿಕರನ್ನು ಇಳಿಸುವುದು ಕೈಯಿಂದ ಮಲ ಹೊರುವವರ ಉದ್ಯೋಗ ನಿಷೇಧ ಮತ್ತು ಅವರ ಪುನರ್ವಸತಿ ಕಾಯ್ದೆ 2013ರ ಅಡಿಯಲ್ಲಿ ಗಂಭೀರ ಅಪರಾಧವಾಗಿದ್ದು, ಇದನ್ನು ಉಲ್ಲಂಘಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತರು ತಿಳಿಸಿದ್ದಾರೆ. ಸಾರ್ವಜನಿಕರು ತಮ್ಮ ಮನೆ ಅಥವಾ ವಾಣಿಜ್ಯ ಸಂಸ್ಥೆಗಳ ಶೌಚಾಲಯದ ಗುಂಡಿಗಳನ್ನು ಸ್ವಚ್ಛಗೊಳಿಸಲು ಕಡ್ಡಾಯವಾಗಿ ಜೆಟ್ಟಿಂಗ್ ಯಂತ್ರಗಳನ್ನೇ ಬಳಸಬೇಕು. ಈ ನಿಟ್ಟಿನಲ್ಲಿ ಸಹಾಯಕ್ಕಾಗಿ ಪಾಲಿಕೆಯು ಅಧಿಕೃತ ವಾಹನ ಮಾಲೀಕರು ಮತ್ತು ಚಾಲಕರ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಪಾಲಿಕೆಯ ಸಿಬ್ಬಂದಿಗಳಾದ ಆಂಜನೇಯ (9535832979), ಶ್ರೀಕಾಂತ್ (9980487004) ಮತ್ತು ಅನಂತ ಮೂರ್ತಿ (9964627849) ಅವರನ್ನು ಸಂಪರ್ಕಿಸಬಹುದು. ಅಲ್ಲದೆ ಖಾಸಗಿ ಜೆಟ್ಟಿಂಗ್ ಯಂತ್ರಗಳಿಗಾಗಿ ಕೃಷ್ಣ (9052245304), ವಿಜಯ ಕುಮಾರ್ (9620733791), ಮಂಜುನಾಥ (9008719827), ಗಂಗಣ್ಣ (9535623784) ಹಾಗೂ ಶಿವಣ್ಣ (9945118602) ಅವರನ್ನು ಸಂಪರ್ಕಿಸಲು ಕೋರಲಾಗಿದೆ. ಒಟ್ಟಾರೆಯಾಗಿ ನಗರದ ನೈರ್ಮಲ್ಯ ಕಾಪಾಡುವಲ್ಲಿ ಮತ್ತು ಕಾನೂನು ಪಾಲಿಸುವಲ್ಲಿ ಸಾರ್ವಜನಿಕರು ಸಹಕರಿಸಬೇಕು ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಈ ಮೂಲಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 24 ಗಂಟೆಯೊಳಗೆ ನೀರಿನ ಸಮಸ್ಯೆ ಪರಿಹಾರ": ಮಸ್ಕಿಯಲ್ಲಿ ಜಿಪಂ ಉಪ ಕಾರ್ಯದರ್ಶಿ ಕಟ್ಟುನಿಟ್ಟಿನ ಸೂಚನೆ



ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಬೇಸಿಗೆ ತೀವ್ರಗೊಳ್ಳುತ್ತಿರುವ ಹಿನ್ನೆಲೆ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮರ್ಪಕ ಪೂರೈಕೆಗೆ ತುರ್ತು ಕ್ರಮಗಳನ್ನು ಕೈಗೊಳ್ಳಬೇಕು ಎಂದು ರಾಯಚೂರು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಸೂಚಿಸಿದರು.**

ಪಟ್ಟಣದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಶನಿವಾರ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕಾಗಿ ತಾಲೂಕು ಪಂಚಾಯತಿಯಲ್ಲಿ ಆರಂಭಿಸಿರುವ ಸಹಾಯವಾಣಿ ಸಂಖ್ಯೆ 08537-270122 ಗೆ ಬಂದ ದೂರುಗಳನ್ನು 24 ಗಂಟೆಯೊಳಗೆ ಪರಿಹರಿಸಬೇಕು. ವಾರಕ್ಕೊಮ್ಮೆ ಫೀಲ್ಡ್ ಟೆಸ್ಟ್ ಕಿಟ್ ಮೂಲಕ ನೀರಿನ ಗುಣಮಟ್ಟ ಪರೀಕ್ಷೆ ನಡೆಸಬೇಕು ಹಾಗೂ ಕನಿಷ್ಠ 15 ದಿನಗಳಿಗೊಮ್ಮೆ ನೀರಿನ ಟ್ಯಾಂಕ್‌ಗಳನ್ನು ಶುಚಿಗೊಳಿಸಿ, ಅದರ ದಾಖಲಾತಿಯನ್ನು ಫೋಟೋ ಸಹಿತ ರಜಿಸ್ಟರ್‌ನಲ್ಲಿ ನಮೂದಿಸಬೇಕು ಎಂದು ಸೂಚಿಸಿದರು.


ತುಂಗಭದ್ರಾ ಎಡದಂಡೆ ನಾಲೆಯಿಂದ ನೀರುಹರಿಯುತ್ತಿರುವುದರಿಂದ ಎಲ್ಲಾ ಕೆರೆಗಳನ್ನು ಭರ್ತಿಗೊಳಿಸಲು ಕ್ರಮ ಕೈಗೊಳ್ಳಬೇಕು. ಈಗಾಗಲೇ ಗುರುತಿಸಿರುವ ಸಮಸ್ಯಾತ್ಮಕ ಹಳ್ಳಿಗಳಿಗೆ ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆಯಲು ಪ್ರಸ್ತಾವನೆ ಸಲ್ಲಿಸುವಂತೆ ಹೇಳಿದರು.ರಾಜ್ಯ ಸರ್ಕಾರದ ಹೊಸ ಆದೇಶದಂತೆ ತೆರಿಗೆ ವ್ಯಾಪ್ತಿಗೆ ಒಳಪಡದ ಆಸ್ತಿಗಳ ಸರ್ವೇ ಕಾರ್ಯವನ್ನು ಏಪ್ರಿಲ್ ಅಂತ್ಯದೊಳಗೆ ಪೂರ್ಣಗೊಳಿಸಿ ತೆರಿಗೆ ವಿಧಿಸಬೇಕು. ಇದರಿಂದ ಗ್ರಾಮ ಪಂಚಾಯತಿಗಳ ಆರ್ಥಿಕ ಭಾರ ಕಡಿಮೆಯಾಗಲಿದೆ. ಕಳೆದ ವರ್ಷ ಜಿಲ್ಲೆಯಲ್ಲಿ ಪ್ರಥಮ ಸ್ಥಾನ ಪಡೆದಿರುವ ತೆರಿಗೆ ವಸೂಲಾತಿಯನ್ನು ಈ ವರ್ಷವೂ ಮುಂದುವರಿಸಲು ನೀಲನಕ್ಷೆ ರೂಪಿಸುವಂತೆ ಸಲಹೆ ನೀಡಿದರು. ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಅಮರೇಶ್ ಮಾತನಾಡಿ, ತುಂಗಭದ್ರಾ ಎಡದಂಡೆ ಆಶ್ರಿತ ಕೆರೆಗಳನ್ನು ಈಗಾಗಲೇ ಭರ್ತಿಗೊಳಿಸಲಾಗಿದೆ.

ನೀರು ವ್ಯರ್ಥವಾಗದಂತೆ ನೀರುಗಂಟಿಗಳ ಮೂಲಕ ನಿಗಾ ವಹಿಸಬೇಕು. ಬಿಸಿಲಿನ ತೀವ್ರತೆಯಿಂದ ಆರೋಗ್ಯದ ಮೇಲೆ ಪರಿಣಾಮ ಬೀಳುವ ಹಿನ್ನೆಲೆಯಲ್ಲಿ ಹಳ್ಳಿಗಳಲ್ಲಿ ಮುಂಜಾಗ್ರತಾ ಕ್ರಮಗಳ ಕು- ರಿತು ಜಾಗೃತಿ ಮೂಡಿಸಬೇಕು ಎಂದು ಹೇಳಿದರು.ಸಭೆಯಲ್ಲಿ ಕಳೆದ ಸಾಲಿನಲ್ಲಿ ಉತ್ತಮ ತೆರಿಗೆ ವಸೂಲಾತಿ ಮಾಡಿದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ತೆ- ರಿಗೆ ವಸೂಲಿಗಾರರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ತಹಸೀಲ್ದಾರ್ ಮಂಜುನಾಥ ಭೋಗಾವತಿ, ಸಹಾಯಕ ನಿರ್ದೇಶಕ ಸೋಮನಗೌಡ ಪಾಟೀಲ್, ತಾಲೂಕು ಯೋಜನಾ ಅಧಿಕಾರಿ ನಿಂಗಪ್ಪ ಸೇರಿದಂತೆ ತಾಪಂ ಸಿಬ್ಬಂದಿ, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ತೆರಿಗೆ ವಸೂಲಿಗಾರರು ಮತ್ತು ಕಂಪ್ಯೂಟರ್ ನಿರ್ವಾಹಕರು ಉಪಸ್ಥಿತರಿದ್ದರು. ವರದಿ, ಸುರೇಶ ಬಳಗಾನೂರು.

## ಸ.ಪ್ರ.ದ.ಮಹಿಳಾ ಕಾಲೇಜಿನ ಅತಿಥಿ ಉಪನ್ಯಾಸಕರ ಸಂಘ ಅಸ್ತಿತ್ವಕ್ಕೆ ವಿವಿಧ ಪದಾಧಿಕಾರಿಗಳ ನೇಮಕ

ನೈಜ್ಯ ದೆಸೆ ನ್ಯೂಸ್

**ಸಿಂಧನೂರಿನ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಅತಿಥಿ ಉಪನ್ಯಾಸಕರ ಸಂಘವು ಅಸ್ತಿತ್ವಗೊಂಡು ಇದರಲ್ಲಿ ವಿವಿಧ ಪದಾಧಿಕಾರಿಗಳು ನೇಮಕಗೊಂಡರು.**



ಗೌರವಾಧ್ಯಕ್ಷರು ಡಾ.ಮುದುಕಪ್ಪ ಕೆ, ಅಧ್ಯಕ್ಷರಾಗಿ ಡಾ.ಮದಗಪ್ಪ.ಜಿ, ಕಾರ್ಯಾಧ್ಯಕ್ಷರಾಗಿ ಶಂಕರ ವಾಲಿಕಾರ, ಉಪಾಧ್ಯಕ್ಷರಾಗಿ ಜಯಪ್ಪ ಗೊರೇಬಾಳ, ಹಾಗೂ ಪ್ರಿಯಾ ಮೇಟಿ, ಪ್ರಧಾನ ಕಾರ್ಯದರ್ಶಿಯಾಗಿ ಡಾ. ಬಸವರಾಜ ಬಳಿಗಾರ, ಕಾರ್ಯದರ್ಶಿಯಾಗಿ ವೀರೇಶ ಕನ್ನಾರಿ, ಸಂಘಟನಾ ಕಾರ್ಯದರ್ಶಿಯಾಗಿ ಸರಪರಾಜ್ ಖಾನ್, ಪತ್ರಿಕಾ ಕಾರ್ಯದರ್ಶಿಯಾಗಿ ಗೋಪಿ, ಖಜಾಂಚಿಯಾಗಿ ಶಂಕರಪ್ಪ ಪತ್ತಾರ, ಸೇರಿದಂತೆ ಸಲಹಾ ಸಮಿತಿಯ ಸದಸ್ಯರಾದ ಮಹೇಶ್ವರಿ, ವಿಠಲ್ ದಂಡಿನ, ಶಿವರಾಜ, ಡಾ.ವಿರುಪಾಕ್ಷ, ಮಂಜುನಾಥ, ಎಂ.ಡಿ.ಲಿಯಾಕತ್, ಬಸವರಾಜ, ಕು.ಸನಾ ಅಂಜುಮ್ ಪದಾಧಿಕಾರಿಗಳಾಗಿ ನೇಮಕಗೊಂಡಿದ್ದಾರೆ.

## ಸಿರವಾರ ಪಟ್ಟಣ ಪಂಚಾಯಿತಿ ಸದಸ್ಯ ಕೃಷ್ಣ ನಾಯಕ್ ಕುಟುಂಬದ ದುರಂತಕ್ಕೆ ಸಚಿವ ಬೋಸರಾಜು, ಶಾಸಕ ಹಂಪಯ್ಯ ನಾಯಕ್ ಸಾಂತ್ವನ

ನೈಜ್ಯ ದೆಸೆ ನ್ಯೂಸ್

**ಸುರಪುರ ಸಮೀಪ ನಡೆದ ರಸ್ತೆ ಅಪಘಾತದಲ್ಲಿ ಆರು ಮಂದಿ ಮೃತ್ಯು ಹಿನ್ನೆಲೆ; ಕುಟುಂಬಸ್ಥರ ನಿವಾಸಕ್ಕೆ ಭೇಟಿ ನೀಡಿ ಧೈರ್ಯ ತುಂಬಿದ ನಾಯಕರು ಮಾನ್ವಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಿರವಾರ ತಾಲೂಕಿನ ಸಿರವಾರ ಪಟ್ಟಣದ ಪಟ್ಟಣ ಪಂಚಾಯಿತಿ ಸದಸ್ಯರಾದ ಶ್ರೀ ಕೃಷ್ಣ ನಾಯಕ್ ಹಾಗೂ ಅವರ ಕುಟುಂಬದ ಆರು ಮಂದಿ ನಿನ್ನೆ ಸುರಪುರ ತಾಲೂಕಿನ ಸಮೀಪ ಸಂಭವಿಸಿದ ರಸ್ತೆ ಅಪಘಾತದಲ್ಲಿ ಮೃತಪಟ್ಟಿರುವ ದುರ್ಘಟನೆ ಹಿನ್ನೆಲೆ,**




ಸಿರವಾರದಲ್ಲಿ ಅಪಘಾತದಲ್ಲಿ ಮೃತಪಟ್ಟ ಕುಟುಂಬದವರ ನಿವಾಸಕ್ಕೆ ಭೇಟಿ ನೀಡಿ ಸಚಿವ ಎನ್.ಎಸ್. ಬೋಸರಾಜು ಹಾಗೂ ಶಾಸಕ ಹಂಪಯ್ಯ ನಾಯಕ್ ಸಾಂತ್ವನ ನೀಡಿದರು.

ಈ ದಿನ ಸಿರವಾರ ಪಟ್ಟಣದಲ್ಲಿರುವ ಅವರ ನಿವಾಸಕ್ಕೆ ಭೇಟಿ ನೀಡಿದ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಪರಿಷತ್ ಸಭಾ ನಾಯಕ ಸನ್ಮಾನ್ಯ ಶ್ರೀ ಎನ್.ಎಸ್. ಬೋಸರಾಜು ಮತ್ತು ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕ ಸನ್ಮಾನ್ಯ ಶ್ರೀ ಹಂಪಯ್ಯ ನಾಯಕ್ ಅವರು ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಚುಕ್ಕಿ ಶಿವಕುಮಾರ್, ಪಂಚ ಗ್ಯಾರಂಟಿಗಳ ಅಧ್ಯಕ್ಷರಾದ ಬ್ರಿಜೇಶ್ ಪಾಟೀಲ್, ಚುಕ್ಕಿ ಸೋಗಪ್ಪ ಸಾಹುಕಾರ್,

ಗುಡದಿನ್ನಿ ಶರಣಯ್ಯ ನಾಯಕ್, ಶ್ರೀನಿವಾಸ್ ಜಾಲಾಪುರ ಕ್ಯಾಂಪ್, ಬಸವರಾಜ್ ನಾಯಕ್ ಜಾಲಾಪುರ, ಶಿವಪ್ಪಗೌಡ ಹಳ್ಳಿಹೊಸೂರು, ದಾನನ್ ಗೌಡ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಶ್ರೀಮತಿ ರೇಣುಕಾ, ಅಬ್ರಹಾಮ್ ಹೊನ್ನಟ್ಟಿಗಿ, ಅಮರೇಶಪ್ಪ ಸಾಹುಕಾರ್, ಪಟ್ಟಣ ಪಂಚಾಯಿತಿ ಸದಸ್ಯರಾದ ಹಾಸನ್ ಅಲ್ಲಿ, ಚನ್ನಪ್ಪ ನಾಯಕ ಗಡ್ಲಾ, ಸಿರವಾರ ತಾಲೂಕು ದಂಡಾಧಿಕಾರಿಗಳಾದ ಅಶೋಕ್ ಪವಾರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಬೇಸಿಗೆ ಕಾಲದ ರೋಗಗಳ ತಡೆಗಟ್ಟುವಿಕೆಗೆ ಆರೋಗ್ಯ ಇಲಾಖೆ ಸಿದ್ಧತೆ :ಡಾ.ಮೇರಿ ಭಂಡಾರಿ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಬೇಸಿಗೆ ಕಾಲದಲ್ಲಿ ವಿಪರೀತ ಶಾಖದಿಂದ ಮನುಷ್ಯನಿಗೆ ಅನೇಕ ರೋಗ ಬರುವುದು ಸಹಜ ಇದರ ಬಗ್ಗೆ ಜನರಿಗೆ ವ್ಯಾಪಕ ಪ್ರಚಾರ ಮಾಡಿ ಆರೋಗ್ಯ ಕಾಪಾಡಲು ಮೇಲ್ವಿಚಾರಣೆ ಮಾಡುವುದು ನಮ್ಮ ಜವಾಬ್ದಾರಿ ಎಂದು ನಗರ.ಆ.ಕೇಂದ್ರದಲ್ಲಿ ನಡೆದ ತಾಲೂಕಾ ಮಟ್ಟದ ಹೆಚ್.ಐ.ಓ ಸಿಬ್ಬಂದಿಗಳ ತುರ್ತು ಸಭೆಯಲ್ಲಿ ಡಾ.ಮೇರಿ ಭಂಡಾರಿ ಮಾತನಾಡಿ ನಿರ್ದೇಶಿಸಿದರು.**



ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಚೇರಿಯಿಂದ ಆಯೋಜಿಸಲಾದ ತುರ್ತು ಸಭೆಯಲ್ಲಿ, ಬೇಸಿಗೆಯ ವಿಪರೀತ ತಾಪಮಾನ ಹಾಗೂ ನೀರಿನಿಂದ ಹರಡುವ ರೋಗಗಳ ನಿಯಂತ್ರಣದ ಭಾಗವಾಗಿ ಮನೆ ಮನೆಗೆ ತೆರಳಿದಾಗ ಓ.ಆರ್.ಎಸ್ ದ್ರಾವಣ ಕುಡಿಯಲು ಹಾಗೂ ಹೆಚ್ಚಿನ ನೀರಿನ ತೇವಾಂಶದ ಕೊರತೆ ನೀಗಿಸಲು ಲವಣಾಂಶಗಳಿಂದ ಕೂಡಿದ ನೀರನ್ನು ಹೆಚ್ಚು ಹೊತ್ತು ಬಳಸಲು ಒಂದೆ ಸಾರಿಗೆ ನೀರು ಸೇವಿಸದೆ 2-3 ಸಿಪ್ ನಂತೆ ಸೇವನೆಗೆ ಆದ್ಯತೆ ನೀಡಲು ವ್ಯಾಪಕ ಪ್ರಚಾರ ಕೈಗೊಳ್ಳಲು ವ್ಯಾಪಕ ಪ್ರಚಾರ ಕೈಗೊಳ್ಳುವಂತೆ ಸಲಹೆ ನೀಡಿದರು ಮತ್ತು ಸೂರ್ಯನ ಶಾಖ ಹೆಚ್ಚಾದಂತೆ ದಣಿಯುವ ಹೆಚ್ಚಿನ ಕೆಲಸಗಳನ್ನು ಮಾಡಲು ಮುಂದಾಗದೆ ದೇಹದ ತೇವಾಂಶ ಉಳಿಸಿಕೊಳ್ಳಲು ಸೂಚಿಸಿದರು.

ಮತ್ತು ಕಾಳಜಿ ವಹಿಸಲುಬೇಕಾದ ಕು- ರಿತು ಮಹತ್ವದ ನಿರ್ಧಾರಗಳನ್ನು ಕೈಗೊಳ್ಳಲಾಯಿತು. ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಹಿರಿಯ ಆರೋಗ್ಯ ಸಹಾಯಕ ಸಂಗನಗೌಡ ಮಾತನಾಡಿ ಪ್ರಮುಖವಾಗಿ ಸಾರ್ವಜನಿಕರ ಆರೋಗ್ಯ ರಕ್ಷಣೆ ಮತ್ತು ಅಧಿಕಾರಿಗಳ ಕರ್ತವ್ಯ ನಿರ್ವಹಣೆಯ ಬಗ್ಗೆ ಸುದೀರ್ಘ ಚರ್ಚೆ ನಡೆಸಲಾಯಿತು. ವಿಪರೀತ ಶಾಖದಿಂದ ಉಂಟಾಗುವ ಜ್ವರ, ವಾಂತಿ-ಬೇಧಿ ಹಾಗೂ ಟೈಫಾಯಿಡ್‌ನಂತಹ ಪ್ರಕರಣಗಳನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು ಮತ್ತು ಸರ್ಕಾರದ ನಿಯಮಗಳನ್ನು ಎಲ್ಲಾ ಹಂತಗಳಲ್ಲಿ ಪಾಲಿಸಲು ತಾಲೂಕಾ ಎಪಿಡೆಮಲಾಜಾಸ್ಟಿ ನಿಖಿಲ್ ಅಧಿಕಾರಿಗಳಿಗೆ ಸೂಚಿಸಿದರು ಮತ್ತು ಕುಡಿಯುವ ನೀರಿನ ಪರೀಕ್ಷಾ ವರದಿಯಲ್ಲಿ ಕುಡಿಯಲು ಯೋಗ್ಯವಲ್ಲ ಎಂದು ಕಂಡುಬಂದ ನೀರಿನ ಮೂಲಗಳ ಬಗ್ಗೆ ತಕ್ಷಣವೇ ಗಮನಹರಿಸಿ, ಸಂಬಂಧಪಟ್ಟ ಗ್ರಾಮ ಪಂಚಾಯತ ಅಧಿಕಾರಿಗಳ ಮುಖೇನ ಸಮರೋಪಾದಿಯಲ್ಲಿ ಕ್ಲೋರಿನೇಷನ್ ಕಾರ್ಯ ಕೈಗೊಳ್ಳಲು ಮತ್ತು ಸರಬರಾಗುವ ಬಗ್ಗೆ ಖಚಿತಪಡಿಸಲು ಆರೋಗ್ಯ ನಿರೀಕ್ಷಣಾಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು.

ಬಿಸಿಲಿನ ತಾಪ ಹೆಚ್ಚಾಗಿರುವುದರಿಂದ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದರ ಜೊತೆಗೆ, ರೋಗ ಲಕ್ಷಣಗಳು ಕಂಡುಬಂದ ತಕ್ಷಣವೇ ಸೂಕ್ತ ಚಿಕಿತ್ಸೆ ಮತ್ತು ಪ್ರಕರಣಗಳ ನಿರ್ವಹಣೆಯನ್ನು ನಿಯಮಾವಳಿಗಳಂತೆ ನಿರ್ವಹಿಸಬೇಕು ಎಂದು ತಿಳಿಸಲಾಯಿತು. ಇದೇ ಸಂದರ್ಭದಲ್ಲಿ ತಾಲೂಕಾ ವಿ.ಬಿ.ಡಿ ಮೇಲ್ವಿಚಾರಕ ಎಫ್.ಎ.ಹಣಗಿ ಮಾತನಾಡಿ ಡೆಂಗ್ಯೂ ನಿಯಂತ್ರಣದ ಬಗ್ಗೆಯೂ ಚರ್ಚಿಸಲಾಗಿ ತಾಲೂಕಿನ ಸಮೀಪದ ಬೇರೆ ತಾಲೂಕಿನಿಂದ ಬರಬಹುದಾದ ವಲಸಿಗ ಪ್ರಕರಣಗಳ ಬಗ್ಗೆ ಚರ್ಚಿಸಿ ನಿರ್ದೇಶಿಸಲಾಯಿತು, ಖಾಸಗಿ ಪ್ರಯೋಗಾಲಯಗಳಿಂದ ಬರುವ ರಕ್ತ ಮಾದರಿ ಸಂಗ್ರಹಣೆ ಮತ್ತು ವರದಿಗಳನ್ನು ಸೂಕ್ತವಾಗಿ ವಿಶ್ಲೇಷಿಸಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಟ್ಟದಲ್ಲಿ ಕ್ರಮ ವಹಿಸಲು ಸೂಚಿಸಲಾಯಿತು.

ನಗರ. ಆ.ಕೇಂದ್ರವ್ಯಾಪ್ತಿಯಲ್ಲಿ ಹೆಚ್ಚಿನ ಜನಸಂದಣಿ ಮತ್ತು ಹೆಚ್ಚಿನ ಅಪಾಯಕಾರಿ ಘೋಷಿಸಿದ ಏರಿಯಾಗಳಲ್ಲಿ ಲಾರ್ವಾ ಸಮೀಕ್ಷಾ ಕಾರ್ಯದ ಪ್ರಗತಿಯನ್ನು ಪ್ರಸ್ತುತ ಇರುವ ಕಡಿಮೆ ಸಾಧನೆಯನ್ನು ಶೇಕಡಾ 85-90 ಕ್ಕೆ ಹೆಚ್ಚಿಸಲು ಎಲ್ಲ ಸಿಬ್ಬಂದಿಗಳು ಶ್ರಮಿಸಬೇಕೆಂದು ಕಟ್ಟುನಿಟ್ಟಿನ ಸಲಹೆ ನೀಡಲಾಯಿತು. ಸಾರ್ವಜನಿಕರು ಬಿಸಿಲಿನಿಂದ ರಕ್ಷಿಸಿಕೊಳ್ಳಲು ಹೆಚ್ಚು ನೀರು ಸೇವಿಸಬೇಕು ಮತ್ತು ಆಹಾರ ಹಾಗೂ ನೀರಿನ ಶುದ್ಧತೆಗೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಮನವಿ ಮಾಡಿದರು.

ನಡೆದ ಸಭೆಯಲ್ಲಿ ತಾಲ್ಲೂಕು ಆರೋಗ್ಯ ಅಧಿಕಾರಿಗಳಾದ ಡಾ. ಅಯ್ಯನಗೌಡ ರವರ ನಿರ್ದೇಶನದಂತೆ, ತಾಲ್ಲೂಕು ವಿ.ಬಿ.ಡಿ ಮೇಲ್ವಿಚಾರಕರಾದ ಎಫ್.ಎ. ಹಣಗಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಸಂಗನಗೌಡ ಎಪಿಡೆಮಲಾಜಿಸ್ಟ ನಿಖಿಲ್ ತಾಲೂಕಿನ ಆರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಸ್ಥಳಿಯ ಸಿಬ್ಬಂದಿಗಳು,ಆಶಾ. ಕಾ.ಕರ್ತೆಯರು ಉಪಸ್ಥಿತರಿದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.